ಸಂಪುಟ: 11 ಸಂಚಿಕೆ: 180 ಪುಟ: 4+2 ಬೆಲೆ : 3.00 ಶುಕ್ರವಾರ, ಆಗಸ್ಟ್ 21, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶಿರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 180 Pages : 4+2 Rate : 3.00 Friday , August 21, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಅರಸು ಹಾಕಿದ ಸಾಮಾಜಿಕ ನ್ಯಾಯದ ಹಾದಿಯಲ್ಲಿ ಸಾಗೋಣ: ಡಿಸಿ ಶ್ರೀಧರ್


# ಅರಸು ಆದರ್ಶ ಅಳವಡಿಸಿಕೊಳ್ಳಿ

**ವಿಜಯಸಾಕ್ಷಿ ಸುದ್ದಿ, ಗದಗ**

ಹಿಂದುಳಿದ ವರ್ಗಗಳ ಏಳಿಗೆ ಹಾಗೂ ಸಾಮಾಜಿಕ ಸಮಾನತೆಗೆ ಭದ್ರ ಬುನಾದಿ ಹಾಕಿದ ದಿ. ಡಿ. ದೇವರಾಜ ಅರಸು ಅವರ ಕೊಡುಗೆ ಕರ್ನಾಟಕಕ್ಕೆ ಅಪಾರ. ಅವರು ತೋರಿದ ಸಾಮಾಜಿಕ ನ್ಯಾಯದ ಹಾದಿಯಲ್ಲಿ ಇಂದಿನ ಪೀಳಿಗೆ ಸಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಕರೆ ನೀಡಿದರು.

ನಗರದ ಮುಳಗುಂದ ರಸ್ತೆಯ ಕನಕ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಗುರುವಾರ ನಡೆದ ದಿ. ಡಿ. ದೇವರಾಜ ಅರಸು ಅವರ 111ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ದೊರಕಬೇಕು ಎಂಬ ದೂರದೃಷ್ಟಿಯಿಂದ ಆಡಳಿತ ನಡೆಸಿದ ಅರಸು ಅವರು ಉಳುವವನೇ ಭೂಮಿಯ ಒಡೆಯ ಎಂಬ ಐತಿಹಾಸಿಕ ಭೂಸುಧಾರಣಾ ಕಾಯ್ದೆ ಜಾರಿಗೆ ತಂದು ಲಕ್ಷಾಂತರ ಬಡ ರೈತರಿಗೆ ಭೂಮಿಯ ಹಕ್ಕು ಕಲ್ಪಿಸಿದರು. ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಸೂಕ್ತ ಪ್ರಾತಿನಿಧ್ಯ ದೊರಕಿಸಲು ಮೀಸಲಾತಿ ಜಾರಿಗೆ ತಂದರು. ವಿದ್ಯಾರ್ಥಿಗಳ ಶಿಕ್ಷಣಕ್ಕೆ ಉತ್ತೇಜನ ನೀಡಲು ವಸತಿ



ನಿಲಯಗಳ ಸ್ಥಾಪನೆ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದರು ಎಂದು ಶ್ರೀಧರ್ ಹೇಳಿದರು.

ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿ ಹಾಗೂ ಉಪನ್ಯಾಸಕ ಪ್ರಭಾಕರ ಉಳ್ಳಾಗಡ್ಡಿ ಮಾತನಾಡಿ, ಅರಸು ಅವರು ಶೋಷಿತರು ಹಾಗೂ ಹಿಂದುಳಿದವರನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಹಲವು ಸಾಮಾಜಿಕ ಸುಧಾರಣೆಗಳನ್ನು ಜಾರಿಗೆ ತಂದಿದ್ದರು. ಅವರ ಆಡಳಿತದ ಅವಧಿಯಲ್ಲಿ ಕೈಗೊಂಡ ಜನಪರ ಕ್ರಮಗಳು ಇಂದಿಗೂ ಪ್ರಸ್ತುತವಾಗಿವೆ ಎಂದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಬಸವರಾಜ ವಿ. ಬಳ್ಳಾರಿ ಮಾತನಾಡಿ, ಅರಸು ಅವರು ಹಿಂದುಳಿದ ವರ್ಗಗಳ ಶೈಕ್ಷಣಿಕ ಪ್ರಗತಿಗೆ ಒತ್ತು ನೀಡಿ ವಸತಿ ನಿಲಯಗಳನ್ನು ಆರಂಭಿಸುವ ಮೂಲಕ ಸಾವಿರಾರು ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶ ಕಲ್ಪಿಸಿದರು. ಗದಗ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾಡಳಿತದ ಸಹಕಾರದಿಂದ 48ಕ್ಕೂ ಹೆಚ್ಚು ವಸತಿ ನಿಲಯಗಳು ಮತ್ತು ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಸಾವಿರಾರು ಬಡ ವಿದ್ಯಾರ್ಥಿಗಳಿಗೆ ಆಸರೆಯಾಗಿವೆ ಎಂದರು.

### ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ರಾಜ್ಯ ಪ್ರಶಸ್ತಿ ವಿಜೇತ ಜನಪದ ಕಲಾವಿದ ವೀರಣ್ಣ ಅಂಗಡಿ ಹಾಗೂ ಸಂಗಡಿಗರು ದೇವರಾಜ ಅರಸು ಅವರ ಕುರಿತು ಸ್ವರಚಿತ ಗೀತೆ ಹಾಗೂ ನಾಡಗೀತೆ ಪ್ರಸ್ತುತಪಡಿಸಿದರು.

**ಅರಸು ಅವರ ಸಾಧನೆಗಳನ್ನು ಸ್ಮರಿಸುವುದಷ್ಟೇ ಅಲ್ಲ, ಅವರು ತೋರಿದ ಹಾದಿಯಲ್ಲಿ ಸಾಗುವುದು ಹಾಗೂ ಸಮಾಜದ ಏಳಿಗೆಗೆ ಶ್ರಮಿಸುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ.**
**- ಸಿ.ಎನ್. ಶ್ರೀಧರ್**, ಜಿಲ್ಲಾಧಿಕಾರಿ

ಜಿಲ್ಲಾ ಹಾಲುಮತ ಸಂಘದ ಅಧ್ಯಕ್ಷ ಫಕೀರಪ್ಪ ಹೆಬಸೂರ ಮಾತನಾಡಿ, ಅರಸು ಅವರ ಭೂಸುಧಾರಣೆ ಹಾಗೂ ಸಾಮಾಜಿಕ ನ್ಯಾಯದ ಯೋಜನೆಗಳು ಬಡವರು ಮತ್ತು ಶೋಷಿತರಲ್ಲಿ ಆತ್ಮಗೌರವದ ಬದುಕಿಗೆ ದಾರಿ ಮಾಡಿಕೊಟ್ಟಿವೆ. ಇಂದಿನ ಮಕ್ಕಳು ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರಂತಹ ವಿಜ್ಞಾನಿಗಳು ಹಾಗೂ ದೇಶಪ್ರೇಮಿಗಳಾಗಿ ಬೆಳೆಯಲು ಪೋಷಕರು ಶಿಕ್ಷಣದ ಜತೆಗೆ ಸಂಸ್ಕಾರ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅಮಿತ್ ಬಿದರಿ, ತಹಶೀಲ್ದಾರ್ ಶ್ರೀನಿವಾಸ ಕುಲಕರ್ಣಿ, ರಾಜ್ಯ ಹಾಲುಮತ ಸಂಘದ ಅಧ್ಯಕ್ಷ ರುದ್ರಣ್ಣ ಗುಳಗುಳಿ, ಅಲೆಮಾರಿ ಸಂಘದ ಜಿಲ್ಲಾಧ್ಯಕ್ಷ ಹರೀಶ್ ಪೂಜಾರ ಸೇರಿದಂತೆ ಅಧಿಕಾರಿಗಳು, ಮುಖಂಡರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

## ಸೇವಂತಿ ಹೂ ಕೆಜಿಗೆ ₹800; ಹಬ್ಬದ ಸಾಮಗ್ರಿ ಖರೀದಿಗೆ ಮುಗಿಬಿದ್ದ ಜನ

# ವರಮಹಾಲಕ್ಷ್ಮಿ ಹಬ್ಬದ ಖರೀದಿ ಭರಾಟೆ; ಬೆಲೆ ಏರಿಕೆಯ ಬಿಸಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶ್ರಾವಣ ಮಾಸದ ಎರಡನೇ ಶುಕ್ರವಾರ ಆಚರಿಸುವ ವರಮಹಾಲಕ್ಷ್ಮಿ ವ್ರತದ ಹಿನ್ನೆಲೆಯಲ್ಲಿ ಪಟ್ಟಣದ ಮಾರುಕಟ್ಟೆಯಲ್ಲಿ ಗುರುವಾರ ಖರೀದಿ ಭರಾಟೆ ಜೋರಾಗಿತ್ತು. ಹೂವು, ಹಣ್ಣು, ಪೂಜಾ ಸಾಮಗ್ರಿ, ಲಕ್ಷ್ಮಿ ಮೂರ್ತಿ ಹಾಗೂ ಅಲಂಕಾರಿಕ ವಸ್ತುಗಳ ಖರೀದಿಗೆ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದರಿಂದ ಮಾರುಕಟ್ಟೆ ಜನದಟ್ಟಣೆಯಿಂದ ಕೂಡಿತ್ತು.

ಹಬ್ಬದ ಸಂಭ್ರಮದ ನಡುವೆಯೇ ಅಗತ್ಯ ವಸ್ತುಗಳ ಬೆಲೆ ಏರಿಕೆ ಗ್ರಾಹಕರಿಗೆ ಬಿಸಿ ಮುಟ್ಟಿಸಿದೆ. ಸೇವಂತಿ ಹೂವಿನ ದರ ಕೆಜಿಗೆ ₹800ಕ್ಕೆ ತಲುಪಿದ್ದು, ದುಬಾರಿ ದರದಿಂದಾಗಿ ಗ್ರಾಹಕರು ಕೆಜಿ ಅಥವಾ ಅರ್ಧ ಕೆಜಿ ಬದಲಾಗಿ 50ರಿಂದ 100 ಗ್ರಾಂನಷ್ಟು ಮಾತ್ರ ಖರೀದಿಸುತ್ತಿರುವುದು ಕಂಡುಬಂತು.

**ಹಣ್ಣು, ಪೂಜಾ ಸಾಮಗ್ರಿಗೂ ದರ ಏರಿಕೆ**

ಬಾಳೆ, ಸೇಬು, ಕಿತ್ತಳೆ, ಚಿಕ್ಕೂ ಹಾಗೂ ಮೋಸಂಬಿ ಒಳಗೊಂಡ ಹಣ್ಣುಗಳ ಸೆಟ್ ₹150ರಿಂದ ₹200ರವರೆಗೆ ಮಾರಾಟವಾಯಿತು. ಬಾಳೆಕಂಬಕ್ಕೆ ₹50 ದರವಿತ್ತು. ವೀಳ್ಯದೆಲೆ, ಹೂವು, ಬಾಳೆ, ಕಬ್ಬು, ದಿನಸಿ ಹಾಗೂ ಅಲಂಕಾರಿಕ ವಸ್ತುಗಳ ಬೆಲೆಯಲ್ಲೂ ಏರಿಕೆಯಾಗಿದೆ.

ವರಮಹಾಲಕ್ಷ್ಮಿ ಮೂರ್ತಿಗಳಿಗೆ ಬೇಡಿಕೆ ಹೆಚ್ಚಾಗಿದ್ದು, ವಿವಿಧ ಗಾತ್ರದ ಮೂರ್ತಿಗಳನ್ನು ಮಹಿಳೆಯರು ಖರೀದಿಸಿದರು. ಅರಿಶಿಣ, ಕುಂಕುಮ, ಅಕ್ಷತೆ, ಕರ್ಪೂರ ಸೇರಿದಂತೆ ಪೂಜಾ ಸಾಮಗ್ರಿಗಳ ಸಿದ್ಧ ಕಿಟ್‌ಗಳಿಗೂ ಬೇಡಿಕೆ ಕಂಡುಬಂತು. ಹೊಸ ಸೀರೆ, ಬಳೆ ಹಾಗೂ ಅಲಂಕಾರಿಕ ವಸ್ತುಗಳ ಖರೀದಿಯಲ್ಲೂ ಮಹಿಳೆಯರು ಆಸಕ್ತಿ ತೋರಿದರು.

ಬೆಲೆ ಏರಿಕೆಯ ಹಿನ್ನೆಲೆಯಲ್ಲಿ ಮಧ್ಯಮ ವರ್ಗದ ಕುಟುಂಬಗಳು ಅಗತ್ಯ ವಸ್ತುಗಳಿಗೆ ಮಾತ್ರ ಆದ್ಯತೆ ನೀಡಿ ಖರೀದಿ ಪ್ರಮಾಣ ಕಡಿಮೆ ಮಾಡುತ್ತಿರುವುದು ಕಂಡುಬಂತು. ಆದರೂ ಹಬ್ಬದ ಸಂಪ್ರದಾಯಕ್ಕೆ ಧಕ್ಕೆಯಾಗದಂತೆ ತಮ್ಮ ಆರ್ಥಿಕ ಸಾಮರ್ಥ್ಯಕ್ಕೆ ತಕ್ಕಂತೆ ಸರಳವಾಗಿ ಪೂಜೆ ನೆರವೇರಿಸಲು ಕುಟುಂಬಗಳು ಸಜ್ಜಾಗಿವೆ.

ಮಾರುಕಟ್ಟೆಯ ಮುಂದುವರಿದ ಭಾಗದಲ್ಲಿ ದುರಸ್ತಿ ಕಾಮಗಾರಿ ನಡೆಯುತ್ತಿರುವುದರ ಜತೆಗೆ ಹಬ್ಬದ ಖರೀದಿಗೆ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದರಿಂದ ಮಾರುಕಟ್ಟೆ ರಸ್ತೆಯಲ್ಲಿ ಸಂಚಾರ ದಟ್ಟಣೆ ಉಂಟಾಯಿತು. ಪೊಲೀಸರು ಸಂಚಾರ ನಿಯಂತ್ರಿಸಲು ಹರಸಾಹಸಪಟ್ಟರು. ಗ್ರಾಮೀಣ ಭಾಗಗಳಿಂದಲೂ ಜನರು ಪಟ್ಟಣಕ್ಕೆ ಆಗಮಿಸಿದ್ದರಿಂದ ಹೂವು, ಹಣ್ಣು, ಬಟ್ಟೆ, ಬಳೆ ಹಾಗೂ ಪೂಜಾ ಸಾಮಗ್ರಿಗಳ ಮಾರಾಟ ಚುರುಕುಗೊಂಡಿತ್ತು.

---

## ಹರಿ ಜಾತ್ರೆಯ ಅನ್ನದಾಸೋಹಕ್ಕೆ ಅಕ್ಕಿ ಸೇವೆ ಸಮರ್ಪಿಸಿದ ವಸಂತ ಪಡಗದ

**ವಿಜಯಸಾಕ್ಷಿ ಸುದ್ದಿ, ಗದಗ**

ಅವಳಿ ನಗರದ ಒಕ್ಕಲಗೇರಿ ಓಣಿಯ ಗ್ರಾಮದೇವತೆಗಳಾದ ಶ್ರೀ ದ್ಯಾಮವ್ವ ಹಾಗೂ ದುರ್ಗಮ್ಮ ದೇವಿಯರ ಐತಿಹಾಸಿಕ ಹರಿ ಜಾತ್ರಾ ಮಹೋತ್ಸವದ ಅಂಗವಾಗಿ ಭಕ್ತರಿಗೆ ಏರ್ಪಡಿಸಿರುವ ಮಹಾ ಅನ್ನಪ್ರಸಾದ ಸೇವೆಗೆ ಬಿಜೆಪಿ ಯುವ ಮುಖಂಡ ವಸಂತ ಪಡಗದ ಅವರು ಭಕ್ತಿಸೇವೆಯಾಗಿ ಅಕ್ಕಿ ಸಮರ್ಪಿಸಿದ್ದಾರೆ.

18 ವರ್ಷಗಳ ಬಳಿಕ ವಿಜೃಂಭಣೆಯಿಂದ ನಡೆಯುತ್ತಿರುವ ಹರಿ ಜಾತ್ರಾ ಮಹೋತ್ಸವ ಆ.18ರಿಂದ 28ರವರೆಗೆ ನಡೆಯುತ್ತಿದ್ದು, ಜಾತ್ರೆಗೆ ಆಗಮಿಸುವ ಸಾವಿರಾರು ಭಕ್ತರಿಗೆ ಪ್ರತಿದಿನ ದಾಸೋಹದ ವ್ಯವಸ್ಥೆ ಮಾಡಲಾಗಿದೆ.

ಮಹಾ ಅನ್ನಪ್ರಸಾದಕ್ಕೆ ಅಗತ್ಯವಿರುವ ಅಕ್ಕಿಯನ್ನು ಶುಕ್ರವಾರದಿಂದ ಸತತ ಏಳು ದಿನಗಳ ಕಾಲ ವಸಂತ ಪಡಗದ ಅವರು ಭಕ್ತಿಸೇವೆಯಾಗಿ ಒದಗಿಸಲಿದ್ದಾರೆ.

ಇದರ ಮೊದಲ ಹಂತವಾಗಿ ಗುರುವಾರ 50ಕ್ಕೂ ಹೆಚ್ಚು ಅಕ್ಕಿ ಚೀಲಗಳನ್ನು ಜಾತ್ರಾ ಸಮಿತಿಯ ಪ್ರಮುಖರಿಗೆ ಹಸ್ತಾಂತರಿಸಿದರು.



**18 ವರ್ಷಗಳ ಬಳಿಕ ನಡೆಯುತ್ತಿರುವ ಗ್ರಾಮ ದೇವಿಯರ ಹರಿ ಜಾತ್ರೋತ್ಸವದಲ್ಲಿ ವಸಂತ ಪಡಗದ ಹಾಗೂ ಗೆಳೆಯರು ಮಹಾಪ್ರಸಾದಕ್ಕೆ ಅಗತ್ಯವಿರುವ ಅಕ್ಕಿಯನ್ನು ಭಕ್ತಿಸೇವೆಯಾಗಿ ನೀಡುತ್ತಿದ್ದಾರೆ. ಊರಿನ ಗುರು-ಹಿರಿಯರು ಹಾಗೂ ಜಾತ್ರಾ ಸಮಿತಿಯ ಸಹಕಾರದಿಂದ ಈ ಸೇವೆ ನಡೆಯುತ್ತಿದೆ.**
**- ವಿನೋದ ಮೊರಬದ**

ಈ ಸಂದರ್ಭದಲ್ಲಿ ವಿನೋದ ಮೊರಬದ, ಪ್ರವೀಣ ಕರಿಬಿಷ್ಟಿ, ಮೋಹನ ವರವಿ, ಸುನೀಲ ಮುದೇನಗುಡಿ, ಸೋಮು ಮುಳಗುಂದ, ಬಸವರಾಜ ತುಪ್ಪದ, ಕುಮಾರ ಮಾರನಬಸರಿ, ಶ್ರೀಕಾಂತ ರಾಮಗಿರಿ, ಪ್ರವೀಣ ಹಂದೇಲಿ, ವಿನಾಯಕ ಹೊರಕೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

## ಸಾವಿನಲ್ಲೂ ಸಾರ್ಥಕತೆ ಮೆರೆದ ನಿವೃತ್ತ ಮುಖ್ಯೋಪಾಧ್ಯಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ನಿವೃತ್ತ ಮುಖ್ಯೋಪಾಧ್ಯಾಯ ರಾಚಪ್ಪ ವ್ಹಿ. ಕೋರಿ ಅವರು ನಿಧನದ ಬಳಿಕವೂ ಮತ್ತೊಬ್ಬರ ಬದುಕಿಗೆ ಬೆಳಕಾಗುವ ಮೂಲಕ ಸಾವಿನಲ್ಲೂ ಸಾರ್ಥಕತೆ ಮೆರೆದಿದ್ದಾರೆ.

ನಗರದ ವಿವೇಕಾನಂದ ನಗರದ ಕರಿಯಮ್ಮಕಲ್ಲು ಬಡಾವಣೆಯ ನಿವಾಸಿ ರಾಚಪ್ಪ ಕೋರಿ ಅವರು ಆ.17ರಂದು ನಿಧನರಾಗಿದ್ದು, ಅವರ ಸ್ವಇಚ್ಛೆಯಂತೆ ಕುಟುಂಬದವರು ನೇತ್ರದಾನ ಹಾಗೂ ದೇಹದಾನ ನೆರವೇರಿಸಿದ್ದಾರೆ.

ನಿಧನದ ಬಳಿಕ ತಜ್ಞ ವೈದ್ಯರ ತಂಡ ನೇತ್ರದಾನದ ಪ್ರಕ್ರಿಯೆ ಪೂರ್ಣಗೊಳಿಸಿತು. ಬಳಿಕ ಆ.18ರಂದು ಮೃತರ ದೇಹವನ್ನು ವೈದ್ಯಕೀಯ ವಿದ್ಯಾರ್ಥಿಗಳ ಅಂಗರಚನಾ ಶಾಸ್ತ್ರ ಅಧ್ಯಯನಕ್ಕಾಗಿ ಗದಗದ ಡಿ.ಜಿ.ಎಂ. ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯಕ್ಕೆ ದಾನ ಮಾಡಲಾಯಿತು. ಮೃತರ ಅಂತಿಮ ಇಚ್ಛೆಯನ್ನು ಗೌರವಿಸಿದ ಕುಟುಂಬದ ಈ ಮಾನವೀಯ ಕಾರ್ಯ ಸಾರ್ವಜನಿಕರಲ್ಲಿ ನೇತ್ರದಾನ ಹಾಗೂ ದೇಹದಾನದ



ಕುರಿತು ಜಾಗೃತಿ ಮೂಡಿಸುವಂತಾಗಿದೆ. ಮರಣದ ನಂತರವೂ ತಮ್ಮ ದೇಹ ಹಾಗೂ ಅಂಗಾಂಗಳು ಮತ್ತೊಬ್ಬರ ಬದುಕಿಗೆ ಮತ್ತು ವೈದ್ಯಕೀಯ ಶಿಕ್ಷಣಕ್ಕೆ ನೆರವಾಗುವಂತೆ ಮಾಡಿರುವುದು ಮಾದರಿ ಕಾರ್ಯವಾಗಿದೆ.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ, ಕಾರ್ಯದರ್ಶಿ ಲಿಂಗರಾಜ ತೋಟದ, ರಮೇಶ ಶಿಗ್ಲಿ, ರಾಜಣ್ಣ ಮಲ್ಲಾಡದ, ಅಶ್ವಥ್ ಸುಲಾಖೆ ಸೇರಿದಂತೆ ಕುಟುಂಬದ ಸದಸ್ಯರು ಹಾಗೂ ಬಂಧು-ಬಳಗದವರು ಉಪಸ್ಥಿತರಿದ್ದರು.

---

## ಸದ್ಭಾವನೆ, ಸೌಹಾರ್ದಕ್ಕೆ ಪ್ರತಿಯೊಬ್ಬರ ಕೊಡುಗೆ ಅಗತ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಸದ್ಭಾವನಾ ದಿನಾಚರಣೆಯನ್ನು ಆಚರಿಸಲಾಯಿತು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಸದ್ಭಾವನಾ ದಿನದ ಪ್ರತಿಜ್ಞಾ ವಿಧಿ ಬೋಧಿಸಿ, ಜಾತಿ, ಧರ್ಮ, ಪ್ರದೇಶ, ಮತ ಹಾಗೂ ಭಾಷೆಯ ಭೇದವಿಲ್ಲದೆ ದೇಶದ ಎಲ್ಲ ಜನರ ನಡುವೆ ಭಾವೈಕ್ಯತೆ ಮತ್ತು ಸೌಹಾರ್ದ ಬೆಳೆಸಲು ಪ್ರತಿಯೊಬ್ಬರೂ ಶ್ರಮಿಸಬೇಕು ಎಂದರು. ವಿವಿಧತೆಯಲ್ಲಿ ಏಕತೆಯನ್ನು



ಹೊಂದಿರುವ ಭಾರತದಲ್ಲಿ ಎಲ್ಲ ಸಮುದಾಯಗಳ ನಡುವೆ ಪರಸ್ಪರ ಗೌರವ ಮತ್ತು ವಿಶ್ವಾಸ ಬೆಳೆಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್., ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

---

## ದ್ಯಾಮವ್ವ-ದುರುಗಮ್ಮ ಹರಿಜಾತ್ರೆಯ ಎರಡನೇ ದಿನದ ಕಾರ್ಯಕ್ರಮದಲ್ಲಿ ಡಾ. ರಾಚೋಟೇಶ್ವರ ಶ್ರೀ

# ನಮ್ಮ ಆಚರಣೆಗಳಲ್ಲೂ ವಿಜ್ಞಾನ ಅಡಗಿದೆ



**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದಲ್ಲಿ ಪಾರಂಪರಿಕವಾಗಿ ಆಚರಿಸಿಕೊಂಡು ಬರುತ್ತಿರುವ ಪ್ರತಿಯೊಂದು ಆಚರಣೆಯ ಹಿಂದೆಯೂ ವಿಶಿಷ್ಟ ಕಾರಣವಿದ್ದು, ಅವು ವೈಜ್ಞಾನಿಕ ಅಂಶಗಳನ್ನು ಒಳಗೊಂಡಿವೆ. ವಿಜ್ಞಾನ ಮತ್ತು ಆಧ್ಯಾತ್ಮ ಪರಸ್ಪರ ವಿರೋಧಿಗಳಲ್ಲ, ವಿಜ್ಞಾನದೊಂದಿಗೆ ಹೊಂದಿಕೊಂಡು ಸಾಗುವುದೇ ಆಧ್ಯಾತ್ಮದ ಆಶಯ ಎಂದು ಅಂತೂರ-ಬೆಂತೂರ ಬೂದೀಶ್ವರ ಸಂಸ್ಥಾನ ಮಠದ ಡಾ. ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದ ಒಕ್ಕಲಗೇರಿ ಓಣಿಯ ದ್ಯಾಮವ್ವನ ಕಟ್ಟೆ ದೇವಸ್ಥಾನದ ಆವರಣದಲ್ಲಿ ನಡೆಯುತ್ತಿರುವ ಶ್ರೀ ದ್ಯಾಮವ್ವ ಹಾಗೂ ದುರುಗಮ್ಮ ದೇವಿಯರ ಹರಿಜಾತ್ರೋತ್ಸವದ ಎರಡನೇ ದಿನದ ಸಭಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ವಿಜ್ಞಾನ ವಸ್ತುಗಳ ಮೇಲೆ ಪ್ರಯೋಗ ನಡೆಸಿದರೆ, ಆಧ್ಯಾತ್ಮ ಸ್ವಯಂ ಅನುಭವ, ಜ್ಞಾನ ಹಾಗೂ ತಪಸ್ಸಿನ ಮೂಲಕ ಸತ್ಯವನ್ನು ಅರಿಯುವ ಮಾರ್ಗವಾಗಿದೆ. 12 ವರ್ಷಕ್ಕೊಮ್ಮೆ ನಡೆಯುವ ಕುಂಭಮೇಳ ಹಾಗೂ ಜಾತ್ರೆಗಳ ಹಿಂದೆಯೂ ವೈಜ್ಞಾನಿಕ ಕಾರಣಗಳಿವೆ. ತುಳಸಿ, ಬಿಲ್ವಪತ್ರೆ ಹಾಗೂ ಬೇವಿನ ಬಳಕೆಯಿಂದಾಗುವ ಪ್ರಯೋಜನಗಳೇ ನಮ್ಮ ಪೂರ್ವಜರ ವೈಜ್ಞಾನಿಕ ಜ್ಞಾನಕ್ಕೆ ಸಾಕ್ಷಿ ಎಂದರು.

ಭಾರತ ವೇದ ಜ್ಞಾನದ ಮೂಲಕ ಜಗತ್ತಿಗೆ ಜ್ಞಾನದ ಗಂಗೆಯನ್ನು ಹರಿಸಿದೆ. ಇಂದಿನ ಎಐ ಯುಗದಲ್ಲಿಯೂ ಮಾನವ ನಿರ್ಮಿತ ಜ್ಞಾನವೇ ಆಧಾರವಾಗಿದೆ. ಹೀಗಾಗಿ ನಮ್ಮ ಆಚರಣೆ, ಸಂಸ್ಕಾರ ಹಾಗೂ ಪರಂಪರೆಯನ್ನು ಅಧ್ಯಯನ ಮಾಡಿ ಮುಂದಿನ ಪೀಳಿಗೆಗೆ ತಲುಪಿಸಬೇಕು. ಜಾತ್ರೆಗಳು ಸಮುದಾಯದ ಒಗ್ಗಟ್ಟು, ಪರಸ್ಪರ ಪ್ರೀತಿ ಮತ್ತು ವಿಶ್ವಾಸಕ್ಕೆ ನಾಂದಿಯಾಗಲಿ ಎಂದು ಆಶಿಸಿದರು.

**ವಿಜ್ಞಾನ ಮತ್ತು ಆಧ್ಯಾತ್ಮ ಪರಸ್ಪರ ವಿರೋಧಿಗಳಲ್ಲ. ನಮ್ಮ ಆಚರಣೆಗಳಲ್ಲಿಯೂ ವೈಜ್ಞಾನಿಕ ಅಂಶಗಳಿದ್ದು, ಅವುಗಳ ಹಿಂದಿನ ಜ್ಞಾನವನ್ನು ಅರಿತು ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸಬೇಕು.**
**- ಡಾ. ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು**

ಜಾತ್ರಾ ಸಮಿತಿ ಕಾರ್ಯಾಧ್ಯಕ್ಷ ಫಕೀರಪ್ಪ ಹೆಬಸೂರ ಮಾತನಾಡಿ, ದ್ಯಾಮವ್ವ-ದುರುಗಮ್ಮ ದೇವಿಯರ ಜಾತ್ರೆಯ ಇತಿಹಾಸವನ್ನು ವಿವರಿಸಿ, ಭವಿಷ್ಯದಲ್ಲಿ ಭವ್ಯ ಸಮುದಾಯ ಭವನ ನಿರ್ಮಾಣಕ್ಕೆ ಎಲ್ಲರೂ ಸಹಕರಿಸಬೇಕು ಎಂದರು.

ಬಣಜಿಗ ಸಮಾಜದ ಜಿಲ್ಲಾಧ್ಯಕ್ಷ ಈಶಣ್ಣ ಮುನವಳ್ಳಿ ಮಾತನಾಡಿ, ಜಾತ್ರೆಯ ಯಶಸ್ಸಿನಲ್ಲಿ ತಾಯಂದಿರು ಹಾಗೂ ಯುವಕರ ಪರಿಶ್ರಮ ಪ್ರಮುಖವಾಗಿದೆ. ಜಾತ್ರೆಯ ಇತಿಹಾಸವನ್ನು ಪುಸ್ತಕ ರೂಪದಲ್ಲಿ ದಾಖಲಿಸಿ ಮುಂದಿನ ಪೀಳಿಗೆಗೆ ಪರಿಚಯಿಸಬೇಕು ಎಂದು ಹೇಳಿದರು.

ನಗರಸಭಾ ಸದಸ್ಯ ರಾಘವೇಂದ್ರ ಯಳವತ್ತಿ ಸೇರಿದಂತೆ ಗಣ್ಯರು ಮಾತನಾಡಿದರು. ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ಶಿವಶರಣೆ ನೀಲಮ್ಮ ತಾಯಿ ಅಸುಂಡಿ, ಕೊಟ್ರಪ್ಪ ಕಮತರ, ಡಾ. ಡಿ.ಬಿ. ಬಿಡಿನಹಾಳ, ಆರುಣಕುಮಾರ ಚವ್ಹಾಣ, ಆರ್.ಡಿ. ಕಡ್ಡಿಕೊಪ್ಪ, ಪ್ರಕಾಶ ಕರಿ, ನಗರಸಭಾ ಸದಸ್ಯರಾದ ಲಕ್ಷ್ಮವ್ವ ಭಜಂತ್ರಿ, ಪೂರ್ಣಿಮಾ ಭರದ್ವಾಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸುರೇಶ ಮರಳಪ್ಪನವರ ಸ್ವಾಗತಿಸಿದರು. ಬಾಹುಬಲಿ ಜೈನರ ನಿರೂಪಿಸಿದರು. ವಿರೂಪಾಕ್ಷಪ್ಪ ಅಕ್ಕಿ ವಂದಿಸಿದರು. ಬಳಿಕ ಕಾಮಿಡಿ ಕಿಲಾಡಿಯ ಸಂಜು ಬಸಯ್ಯ ಹಾಗೂ ಗದುಗಿನ ನಟರಂಗ ಕಲಾ ಸಂಸ್ಥೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

---

## ಕನ್ನಡ-ಸಂಸ್ಕೃತಿ ಇಲಾಖೆಯ ಸಹಾಯ ಧನಕ್ಕೆ ಅರ್ಜಿ ಅವಧಿ ವಿಸ್ತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2026-27ನೇ ಸಾಲಿನಲ್ಲಿ ನೋಂದಾಯಿತ ಸಂಘ-ಸಂಸ್ಥೆಗಳಿಗೆ ಧನಸಹಾಯ ಹಾಗೂ ಕಲಾವಿದರಿಗೆ ವಾದ್ಯ ಪರಿಕರ, ವೇಷಭೂಷಣ ಖರೀದಿಗೆ ಸಹಾಯಧನ ನೀಡಲು ಅರ್ಜಿ ಸಲ್ಲಿಸುವ ಅವಧಿಯನ್ನು ಸೆ.4ರವರೆಗೆ ವಿಸ್ತರಿಸಲಾಗಿದೆ. ಸಾಮಾನ್ಯ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಯಡಿ ಅರ್ಹ ಸಂಘ-ಸಂಸ್ಥೆಗಳು ಹಾಗೂ ಕಲಾವಿದರು ಸೇವಾಸಿಂಧು ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಚಿತ್ರಕಲೆ ಹಾಗೂ ಶಿಲ್ಪಕಲಾಕೃತಿಗಳ ಪ್ರದರ್ಶನಕ್ಕೂ ಸಹಾಯಧನ ನೀಡಲಾಗುವುದು.

ನಾಡಿನ ಭಾಷೆ, ಕಲೆ, ಸಾಹಿತ್ಯ, ಸಂಗೀತ, ಜನಪದ, ನೃತ್ಯ, ನಾಟಕ ಸೇರಿದಂತೆ ವಿವಿಧ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಈ ಸಹಾಯಧನ ನೀಡಲಾಗುತ್ತಿದೆ. ಹೆಚ್ಚಿನ ಮಾಹಿತಿಗಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿ ಸಂಪರ್ಕಿಸುವಂತೆ ಸಹಾಯಕ ನಿರ್ದೇಶಕ ಡಾ. ಬಸವರಾಜ ವಿ. ಬಳ್ಳಾರಿ ತಿಳಿಸಿದ್ದಾರೆ.

---

### ನಾಳೆ ಪಂಚಮ ಪಗಡಂ ಜಾನಪದ ಆಟ-ನೃತ್ಯಗಳ ಸಂಭ್ರಮ | ವಿವಿಧ ಕಲಾ ಪ್ರಕಾರಗಳ ಪ್ರದರ್ಶನ

## ಜಾನಪದ ಆಟಗಳು ಉಳಿಯಬೇಕು: ಶಂಕರಣ್ಣ ಸಂಕಣ್ಣನವರ




**ವಿಜಯಸಾಕ್ಷಿ ಸುದ್ದಿ, ಗದಗ**

ಜಾನಪದ ಕಲೆ, ಸಂಸ್ಕೃತಿ ಹಾಗೂ ಸಾಂಪ್ರದಾಯಿಕ ಆಟಗಳನ್ನು ಉಳಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ಆ.22ರಂದು ನಗರದ ಎ.ಎಸ್.ಎಸ್. ಕಾಮರ್ಸ್ ಕಾಲೇಜಿನಲ್ಲಿ ವಿಶ್ವ ಜಾನಪದ ದಿನಾಚರಣೆ ಅಂಗವಾಗಿ ಪಂಚಮ ಪಗಡಂ ಜಾನಪದ ಆಟನೃತ್ಯಗಳ ಸಂಭ್ರಮ ಆಯೋಜಿಸಲಾಗಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಶಂಕರಣ್ಣ ಸಂಕಣ್ಣನವರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಗ್ಗೆ 10 ಗಂಟೆಗೆ ಕಾರ್ಯಕ್ರಮ ನಡೆಯಲಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ಜಾನಪದ ಅಕಾಡೆಮಿ ಸಹಯೋಗದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಜಾನಪದ ಪರಂಪರೆ ಹಾಗೂ ಮೂಲ ಜನಪದ ಆಟಗಳನ್ನು ಉಳಿಸಿ ಬೆಳೆಸುವ ಆಶಯದಿಂದ ಕಾರ್ಯಕ್ರಮ ರೂಪಿಸಲಾಗಿದೆ ಎಂದರು.

**ಜಾನಪದ ಆಟಗಳು ಕೇವಲ ಮನರಂಜನೆಯಲ್ಲ. ಮಕ್ಕಳ ದೈಹಿಕ ಚಟುವಟಿಕೆ, ಚಿಂತನಾ ಸಾಮರ್ಥ್ಯ ಹಾಗೂ ಮೆದುಳಿನ ಬೆಳವಣಿಗೆಗೂ ಇವು ಸಹಕಾರಿಯಾಗುತ್ತವೆ. ಇಂತಹ ಆಟಗಳನ್ನು ಉಳಿಸಿ ಮುಂದಿನ ಪೀಳಿಗೆಗೆ ತಲುಪಿಸುವ ಅಗತ್ಯವಿದೆ.**
**- ಶಂಕರಣ್ಣ ಸಂಕಣ್ಣನವರ**, ಸದಸ್ಯ, ಕರ್ನಾಟಕ ಜಾನಪದ ಅಕಾಡೆಮಿ

ಇಡಲಕಿ, ಕುಂಟಬಿಲ್ಲೆ, ಬಗರಿ, ಲಗೋರಿ ಸೇರಿದಂತೆ ಗ್ರಾಮೀಣ ಭಾಗದಲ್ಲಿ ಹಿಂದೆ ಜನಪ್ರಿಯವಾಗಿದ್ದ ಸಾಂಪ್ರದಾಯಿಕ ಆಟಗಳನ್ನು ಆಡಿಸಲಾಗುವುದು. ಅಗತ್ಯ ಪರಿಕರಗಳನ್ನು ಸಿದ್ಧಪಡಿಸಲಾಗಿದ್ದು, ಸಂಪನ್ಮೂಲ ವ್ಯಕ್ತಿಗಳು ಹಾಗೂ ಅಧ್ಯಾಪಕರ ಸಂಘದ ಸಹಕಾರ ಪಡೆಯಲಾಗಿದೆ ಎಂದರು.

ವಿವಿಧ ಜಿಲ್ಲೆಗಳ ಕಲಾತಂಡಗಳು ಮೆರವಣಿಗೆಯಲ್ಲಿ ಪಾಲ್ಗೊಳ್ಳಲಿದ್ದು, ತಂಜಾವೂರು ಸೌತ್‌ಜೋನ್ ಸಿದ್ಧಿಕುಣಿತ, ನಂದಿಧ್ವಜ, ಪುರವಂತಿಕೆ, ಹಗಲು ವೇಷ, ವೀರಗಾಸೆ ಸೇರಿದಂತೆ ವಿವಿಧ ಜಾನಪದ ಕಲಾ ಪ್ರಕಾರಗಳು ಪ್ರದರ್ಶನಗೊಳ್ಳಲಿವೆ. ಸುದ್ದಿಗೋಷ್ಠಿಯಲ್ಲಿ ಡಾ. ಜಿ.ಬಿ. ಪಾಟೀಲ, ಮೌನೇಶ ಬಡಿಗೇರ, ಗೌಡಪ್ಪ ಬೊಮ್ಮಪ್ಪನವರ, ಶಿವು ಭಜಂತ್ರಿ, ಸೋಮು ಚಿಕ್ಕಮಠ ಉಪಸ್ಥಿತರಿದ್ದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಲಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ಪದವಿ ಶಿಕ್ಷಣಕ್ಕೆ ಆತ್ಮವಿಶ್ವಾಸದ ಹೆಜ್ಜೆ ಇಡಿ: ಡಾ. ಸಾರಿಕಾ ಪಾಟೀಲ

**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಪದವಿ ಶಿಕ್ಷಣವು ವಿದ್ಯಾರ್ಥಿಗಳ ಜ್ಞಾನ, ಕೌಶಲ್ಯ ಹಾಗೂ ವ್ಯಕ್ತಿತ್ವವನ್ನು ರೂಪಿಸುವ ಮಹತ್ವದ ಹಂತವಾಗಿದ್ದು, ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ದೊರೆಯುವ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಗಣಿತಶಾಸ್ತ್ರ ಪ್ರಾಧ್ಯಾಪಕಿ ಡಾ. ಸಾರಿಕಾ ಪಾಟೀಲ ಹೇಳಿದರು.

ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐಕ್ಯುಎಸಿ ಘಟಕ ಹಾಗೂ ದೇಶಪಾಂಡೆ ಫೌಂಡೇಶನ್ ಸಹಯೋಗದಲ್ಲಿ 2026-27ನೇ ಸಾಲಿನಲ್ಲಿ ಪ್ರವೇಶ ಪಡೆದ ಪ್ರಥಮ ವರ್ಷದ ವಿದ್ಯಾರ್ಥಿಗಳಿಗಾಗಿ ಆಯೋಜಿಸಿರುವ ಹೊಸ ದಿಗಂತ-2026 : ಪದವಿ ಶಿಕ್ಷಣಕ್ಕೆ ಆತ್ಮವಿಶ್ವಾಸದ ಆರಂಭ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆರು ದಿನಗಳ ಕಾಲ ನಡೆಯುವ ತರಬೇತಿ ಕಾರ್ಯಕ್ರಮದಲ್ಲಿ ತಾರ್ಕಿಕ ಚಿಂತನೆ ಮತ್ತು ಸಾಮರ್ಥ್ಯ, ಜೀವನ ಕೌಶಲ್ಯಗಳು, ಅಂಕೀಯ ಸಿದ್ಧತೆ, ಸ್ವಯಂ ಅರಿವು ಹಾಗೂ ವೃತ್ತಿ ಯೋಜನೆ ಕುರಿತು ತರಬೇತಿ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಹೊಸ ದಿಗಂತ ಕಾರ್ಯಕ್ರಮದ ಸಂಯೋಜಕ ಹುಸೇನಭಾಷಾ ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಕ್ರಮದ ಉದ್ದೇಶ ಹಾಗೂ ತರಬೇತಿಯ ರೂಪುರೇಷೆಗಳ ಕುರಿತು ವಿವರಿಸಿದರು.

ಐಕ್ಯುಎಸಿ ಸಹಸಂಯೋಜಕ ಡಾ. ಮಂಜುನಾಥ ತ್ಯಾಲಗಡಿ ಮಾತನಾಡಿ, ವಿದ್ಯಾರ್ಥಿಗಳು ಹೊಸ ಶೈಕ್ಷಣಿಕ ಪರಿಸರಕ್ಕೆ ಹೊಂದಿಕೊಳ್ಳಲು ಹಾಗೂ ಅಗತ್ಯ ಜೀವನ ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಇಂತಹ ತರಬೇತಿಗಳು ಸಹಕಾರಿಯಾಗುತ್ತವೆ ಎಂದರು.

ಕಾರ್ಯಕ್ರಮದ ಮೊದಲ ದಿನದ ಅಧಿವೇಶನದಲ್ಲಿ ಸಂಪನ್ಮೂಲ ವ್ಯಕ್ತಿ ಸಾವಿತ್ರಿ ಟಿ. ಅವರು ಸಂವಹನ ಕೌಶಲ್ಯಗಳು ಕುರಿತು ತರಬೇತಿ ನೀಡಿದರು. ಉತ್ತಮವಾಗಿ ಮಾತನಾಡುವುದು, ಗಮನವಿಟ್ಟು ಆಲಿಸುವುದು, ಸ್ಪಷ್ಟವಾಗಿ ಅಭಿಪ್ರಾಯ ವ್ಯಕ್ತಪಡಿಸುವುದು ಹಾಗೂ ವೇದಿಕೆಯ ಭಯ ನಿವಾರಿಸಿಕೊಳ್ಳುವ ವಿಧಾನಗಳನ್ನು ಪ್ರಾಯೋಗಿಕ ಉದಾಹರಣೆಗಳ ಮೂಲಕ ತಿಳಿಸಿಕೊಟ್ಟರು.

ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಬೋಧಕರು ಹಾಗೂ ಪ್ರಥಮ ವರ್ಷದ ಬಿ.ಎ., ಬಿ.ಕಾಂ., ಬಿ.ಎಸ್ಸಿ. ಮತ್ತು ಬಿ.ಸಿ.ಎ. ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ಕನಿಷ್ಠ ವೇತನ ₹42 ಸಾವಿರಕ್ಕೆ ಹೆಚ್ಚಿಸಲು ಆಗ್ರಹಿಸಿ ರಾಜ್ಯಮಟ್ಟದ ಪ್ರತಿಭಟನೆ

# ಗುತ್ತಿಗೆ ಕಾರ್ಮಿಕ ಪದ್ಧತಿ ರದ್ದುಪಡಿಸಿ ನೇರ ವೇತನ ಜಾರಿಗೊಳಿಸಿ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಗುತ್ತಿಗೆ, ಹೊರಗುತ್ತಿಗೆ, ದಿನಗೂಲಿ ಹಾಗೂ ತಾತ್ಕಾಲಿಕ ಕಾರ್ಮಿಕ ಪದ್ಧತಿಯನ್ನು ರದ್ದುಪಡಿಸಿ, ದೀರ್ಘಕಾಲದಿಂದ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರನ್ನು ಖಾಯಂಗೊಳಿಸಬೇಕು. ಗುತ್ತಿಗೆ ಹಾಗೂ ಹೊರಗುತ್ತಿಗೆ ಕಾರ್ಮಿಕರಿಗೆ ನೇರ ವೇತನ ಪಾವತಿ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಆಲ್ ಇಂಡಿಯಾ ಸೆಂಟ್ರಲ್ ಕೌನ್ಸಿಲ್ ಆಫ್ ಟ್ರೇಡ್ ಯೂನಿಯನ್ಸ್ (ಎಐಸಿಸಿಟಿಯು) ರಾಜ್ಯಮಟ್ಟದ ಪ್ರತಿಭಟನೆ ನಡೆಸಿತು.

ಎಐಸಿಸಿಟಿಯು ರಾಷ್ಟ್ರೀಯ ಉಪಾಧ್ಯಕ್ಷ ಕ್ಲಿಫ್ಟನ್ ಡಿರೋಜಾರಿಯೊ ಮಾತನಾಡಿ, ಸರ್ಕಾರಿ ಕಚೇರಿಗಳು, ಕಾರ್ಖಾನೆಗಳು, ಆಸ್ಪತ್ರೆಗಳು ಹಾಗೂ ಸಾರ್ವಜನಿಕ ವಲಯದ ಸಂಸ್ಥೆಗಳಲ್ಲಿ ಹಲವು ವರ್ಷಗಳಿಂದ ನಿರಂತರ ಕೆಲಸ ಮಾಡುತ್ತಿರುವ ಗುತ್ತಿಗೆ ಕಾರ್ಮಿಕರಿಗೆ ಉದ್ಯೋಗ ಭದ್ರತೆ ಮತ್ತು ಸಾಮಾಜಿಕ ಭದ್ರತೆ ದೊರೆಯುತ್ತಿಲ್ಲ. ನಿಯಮಿತ ನೌಕರರು ನಿರ್ವಹಿಸುವ ಸಮಾನ ಕೆಲಸಕ್ಕೆ ಸಮಾನ ವೇತನ ಸೇರಿದಂತೆ ಕಾನೂನುಬದ್ಧ




ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಮೈತ್ರಿ ಕೃಷ್ಣನ್ ಮಾತನಾಡಿ, ಮೇ 22ರಂದು ಅಧಿಸೂಚನೆಗೊಂಡ ಪರಿಷ್ಕೃತ ಕನಿಷ್ಠ ವೇತನವನ್ನು ಯಾವುದೇ ಕಾರಣಕ್ಕೂ ತಡೆಹಿಡಿಯದೆ ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ಕನಿಷ್ಠ ವೇತನಕ್ಕಿಂತ ಕಡಿಮೆ ವೇತನ ಪಾವತಿಸುವ ಉದ್ಯೋಗದಾತರ ವಿರುದ್ಧ ತಕ್ಷಣ ತಪಾಸಣೆ ನಡೆಸಿ, ಬಾಕಿ ವೇತನ ವಸೂಲಿ ಹಾಗೂ ಕಾನೂನು ಕ್ರಮ ಕೈಗೊಳ್ಳಬೇಕು ಎಂದರು.

ನಿರಂತರವಾಗಿ ಏರುತ್ತಿರುವ ಜೀವನ ವೆಚ್ಚವನ್ನು ಪರಿಗಣಿಸಿ ಕಾರ್ಮಿಕರ ಕನಿಷ್ಠ ವೇತನವನ್ನು ತಿಂಗಳಿಗೆ ₹42 ಸಾವಿರಕ್ಕೆ ಪರಿಷ್ಕರಿಸಬೇಕು. ಎಲ್ಲ ಅರ್ಹ ಗುತ್ತಿಗೆ ಹಾಗೂ ಹೊರಗುತ್ತಿಗೆ ಕಾರ್ಮಿಕರಿಗೆ ಇಎಸ್‌ಐ ಸೌಲಭ್ಯ ಕಲ್ಪಿಸಿ, ಇಎಸ್‌ಐ ವೇತನ ಮಿತಿಯನ್ನು ಸಮರ್ಪಕವಾಗಿ ಪರಿಷ್ಕರಿಸಲು ಕೇಂದ್ರ ಸರ್ಕಾರದ ಮೇಲೆ ರಾಜ್ಯ ಸರ್ಕಾರ ಒತ್ತಡ ಹೇರಬೇಕು ಎಂದು ಆಗ್ರಹಿಸಿದರು. ಕಾರ್ಮಿಕರಿಗೆ ಉದ್ಯೋಗ ಹಾಗೂ ಸಾಮಾಜಿಕ ಭದ್ರತೆ,

> ಕಾರ್ಮಿಕರ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರ ನಿರ್ಲಕ್ಷಿಸಿದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು.
> – ಎಐಸಿಸಿಟಿಯು ಮುಖಂಡರು

ಆರೋಗ್ಯ, ಹೆರಿಗೆ, ಪಿಂಚಣಿ ಸೌಲಭ್ಯ, ಮಹಿಳಾ ಕಾರ್ಮಿಕರಿಗೆ ಸುರಕ್ಷಿತ ಕೆಲಸದ ವಾತಾವರಣ ಹಾಗೂ ಸಂಘಟನೆಯ ಹಕ್ಕುಗಳನ್ನು ಖಾತರಿಪಡಿಸಬೇಕು ಎಂಬುದು ಸೇರಿದಂತೆ ಹಲವು ಬೇಡಿಕೆಗಳನ್ನು ಪ್ರತಿಭಟನಾಕಾರರು ಮುಂದಿಟ್ಟರು.

ಅಪ್ಪಣ್ಣ, ನಿರ್ಮಲಾ, ನಾಗರಾಜ ಪೂಜಾರ್, ಮೋಹನ್, ರಾಮಣ್ಣ ವಿಟ್ಲ ಸೇರಿದಂತೆ ಕಾರ್ಮಿಕ ಮುಖಂಡರು ಮಾತನಾಡಿದರು. ಕೆ. ನಾಗಲಿಂಗಸ್ವಾಮಿ, ಅಜೀಜ್ ಜಾಗೀದಾರರ್, ಕೇಶವ ನಾಯಕ್, ಅಶೋಕಗೌಡ, ಮಾಯಮ್ಮ, ಪರಶುರಾಮ, ಉಮಾ, ಭಾನುಪ್ರಕಾಶ್, ಬಸವರಾಜ ಎಂ., ಗೌರಿ, ಚಂದ್ರಶೇಖರ್ ಶಿರುಗುಪ್ಪಿ ಸೇರಿದಂತೆ ವಿವಿಧ ಜಿಲ್ಲೆಗಳ ಕಾರ್ಮಿಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಇಂದು ಗದಗದಲ್ಲಿ ನೇರ ಸಂದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಆ.21ರಂದು ನೇರ ಸಂದರ್ಶನ ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 10 ಗಂಟೆಗೆ ಮುಂಡರಗಿ ರಸ್ತೆಯ ಜಗದ್ಗುರು ತೋಂಟದಾರ್ಯ ಎಂಜಿನಿಯರಿಂಗ್ ಕಾಲೇಜು ಎದುರಿನ ಅನ್ನಪೂರ್ಣ ಫೈನಾನ್ಸ್ ಪ್ರೈವೇಟ್ ಲಿಮಿಟೆಡ್ ಕಚೇರಿಯಲ್ಲಿ ಸಂದರ್ಶನ ನಡೆಯಲಿದೆ.

ಅನ್ನಪೂರ್ಣ ಫೈನಾನ್ಸ್ ಪ್ರೈವೇಟ್ ಲಿಮಿಟೆಡ್‌ನಲ್ಲಿ ಎಕ್ಸಿಕ್ಯೂಟಿವ್, ಸೀನಿಯರ್ ಎಕ್ಸಿಕ್ಯೂಟಿವ್ ಹಾಗೂ ಅಸಿಸ್ಟೆಂಟ್ ಬ್ರಾಂಚ್ ಮ್ಯಾನೇಜರ್ ಹುದ್ದೆಗಳಿಗೆ ನೇಮಕಾತಿ ನಡೆಯಲಿದ್ದು, ಪಿಯುಸಿ ಹಾಗೂ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 21ರಿಂದ 30 ವರ್ಷದ ಪುರುಷರು ಮತ್ತು ಮಹಿಳೆಯರು ಭಾಗವಹಿಸಬಹುದು.

ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿ, ಎರಡು ರೆಸ್ಯೂಮ್‌ಗಳ ಪ್ರತಿಗಳು ಹಾಗೂ ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ ತರಬೇಕು. ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಸ್ಥಳದಲ್ಲಿಯೇ ನೋಂದಣಿ ಕಡ್ಡಾಯವಾಗಿದ್ದು, ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ 6363330688, 9901748668 ಹಾಗೂ 6360062240 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಯಿಯ ಪ್ರೀತಿಯನ್ನು ನೆನಪಿಸಿದ ಈಶ್ವರೀಯ ವಿಶ್ವವಿದ್ಯಾಲಯದ ಆತ್ಮೀಯತೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಈಶ್ವರೀಯ ವಿಶ್ವವಿದ್ಯಾಲಯದ ಸೇವಾ ಕೇಂದ್ರದಲ್ಲಿ ಸ್ವಾತಂತ್ರ್ಯ ದಿನಾಚರಣೆ ಹಾಗೂ ಶಾಸಕ ಎಚ್.ಕೆ. ಪಾಟೀಲ ಅವರ ಜನ್ಮದಿನಾಚರಣೆಯನ್ನು ಆತ್ಮೀಯವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಪರಮಾತ್ಮನ ಆಶೀರ್ವಾದ ಪಡೆದು ಮಾತನಾಡಿದ ಶಾಸಕ ಎಚ್.ಕೆ. ಪಾಟೀಲ ಅವರು, ಈಶ್ವರೀಯ ವಿಶ್ವವಿದ್ಯಾಲಯದ ಸೇವಾ ಕೇಂದ್ರದಲ್ಲಿ ದೊರೆತ ಆತ್ಮೀಯತೆಯನ್ನು ಸ್ಮರಿಸಿದರು.

ರಾಜಕಾರಣಿ ಹಾಗೂ ಸಚಿವನಾದ ಬಳಿಕ ಸುಪ್ರೀಂ ಕೋರ್ಟ್, ಹೈಕೋರ್ಟ್ ನ್ಯಾಯಾಧೀಶರು ಹಾಗೂ ಪ್ರಖ್ಯಾತ ವಕೀಲರ ಸಭೆ-ಸಮಾರಂಭಗಳಲ್ಲಿ ಯಾವುದೇ ಹಿಂಜರಿಕೆಯಿಲ್ಲದೆ ಧೈರ್ಯವಾಗಿ ಮಾತನಾಡಿದ್ದೇನೆ. ಆದರೆ, ಇಂದು ಈ ಆಧ್ಯಾತ್ಮಿಕ ಸಭೆಯಲ್ಲಿ ಮಾತನಾಡಲು ನನಗೆ ಪದಗಳೇ ಸಿಗುತ್ತಿಲ್ಲ. ಇಲ್ಲಿ ತೋರಿದ ಪ್ರೀತಿ-ಮಮತೆ ನನ್ನ ತಾಯಿಯ ಪ್ರೀತಿಯನ್ನು ನೆನಪಿಸಿದೆ ಎಂದರು.

ದೀಪ ಬೆಳಗಿಸಿ, ಕೇಕ್ ಕತ್ತರಿಸಿ ತಮ್ಮ ಜನ್ಮದಿನ ಆಚರಿಸಿದ ರೀತಿಯು ತಾಯಿಯ ಪ್ರೀತಿಯನ್ನು ನೆನಪಿಸಿತು. ತಮ್ಮ ತಾಯಿ ಮಾಡುತ್ತಿದ್ದ ಆಚರಣೆಗಳನ್ನು ಇಲ್ಲಿನ ಸಹೋದರಿಯರು ಮುಂದುವರಿಸಿಕೊಂಡು ಹೋಗುತ್ತಿರುವಂತೆ ಭಾಸವಾಯಿತು. ಪ್ರತಿವರ್ಷವೂ ಈ ಪವಿತ್ರ ಸ್ಥಳಕ್ಕೆ ಆಗಮಿಸಿ ಎಲ್ಲರ ಆಶೀರ್ವಾದ ಪಡೆಯಲು ಬಯಸುವುದಾಗಿ ಅವರು ಹೇಳಿದರು.

ಸೇವಾ ಕೇಂದ್ರದ ಸಂಚಾಲಕಿ ಬಿ.ಕೆ. ಜಯಂತಿ ಅಕ್ಕ ಅವರು ಸ್ವಾಗತಿಸಿ ಅಭಿನಂದಿಸಿದರು. ಸ್ವಾತಂತ್ರ್ಯ ದಿನದ ಅಂಗವಾಗಿ ಆಂತರಿಕ ಸ್ವಾತಂತ್ರ್ಯದ ಮಹತ್ವದ ಕುರಿತು ಸಂದೇಶ ನೀಡಿದರು.

ನಂತರ ನೆರೆದಿದ್ದವರಿಗೆ ರಾಜಯೋಗ ಧ್ಯಾನದ ಅಭ್ಯಾಸ ಮಾಡಿಸಿ, ವ್ಯಸನಮುಕ್ತ ಜೀವನ ನಡೆಸುವ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿಯ ಡಾ. ಶ್ರೀಮತಿ ವಿದ್ಯಾ, ಡಾ. ವೇಮನ್ ಸಾವರ್ಕಾ, ಜಿಲ್ಲಾಸ್ಪತ್ರೆಯ ಡಾ. ಗಿರೀಶ್ ನಾಗರಾಳ, ಆಂಜನೇಯ ಕಟಗಿ, ವರದರಾಜ್ ಹೆಬ್ಬೂರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಬಿ.ಕೆ. ರೇಖಾ ವಂದಿಸಿದರು.

### ಹೆಣ್ಣು ಕಲಿತರೆ ಇಡೀ ಕುಟುಂಬವೇ ಸುಶಿಕ್ಷಿತ: ಶಂಕರ ಹಲಗತ್ತಿ

# ಮಹಿಳಾ ಶಿಕ್ಷಣದಿಂದ ಕುಟುಂಬದ ಪ್ರಗತಿ ಸಾಧ್ಯ




**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಶಿಕ್ಷಣ ಪ್ರತಿಯೊಬ್ಬ ಮನುಷ್ಯನ ಮೂಲಭೂತ ಹಕ್ಕಾಗಿದ್ದು, ಮಹಿಳಾ ಶಿಕ್ಷಣದಿಂದ ಕುಟುಂಬ, ಸಮಾಜ ಹಾಗೂ ದೇಶದ ಪ್ರಗತಿ ಸಾಧ್ಯ ಎಂದು ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಹೇಳಿದರು.

ನಗರದ ಶ್ರೀಮತಿ ಕಲ್ಲವ್ವ ಶಿವಪ್ಪಣ್ಣ ಜಿಗಳೂರ ಹಾಗೂ ಸುಶೀಲ ಮುರಿಗೆಪ್ಪ ಶೇಷಗಿರಿ ಪದವಿ ಮಹಾವಿದ್ಯಾಲಯದಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘದ ಶಿಕ್ಷಣ ಮಂಟಪದ ವತಿಯಿಂದ ಆಯೋಜಿಸಿದ್ದ ಮಹಿಳೆ: ಶಿಕ್ಷಣ ಹಾಗೂ ಆರೋಗ್ಯ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ. ಶಿಕ್ಷಿತ ತಾಯಿ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿ ಹಾಕುವುದರ ಜತೆಗೆ ಅವರ ಆರೋಗ್ಯ ಹಾಗೂ ಶಿಕ್ಷಣದ ಬಗ್ಗೆ ಸೂಕ್ತ ಕಾಳಜಿ ವಹಿಸಬಲ್ಲಳು. ಒಬ್ಬ ಪುರುಷ ಶಿಕ್ಷಣ ಪಡೆದರೆ ಒಬ್ಬ ವ್ಯಕ್ತಿ ಕಲಿತಂತಾಗುತ್ತದೆ; ಆದರೆ ಒಬ್ಬ ಮಹಿಳೆ ಶಿಕ್ಷಣ ಪಡೆದರೆ ಇಡೀ ಕುಟುಂಬವೇ ಸುಶಿಕ್ಷಿತವಾಗುತ್ತದೆ ಎಂದು ಶಂಕರ ಹಲಗತ್ತಿ ಹೇಳಿದರು. ಕೇವಲ ಪದವಿ ಪಡೆಯುವುದೇ ಶಿಕ್ಷಣದ ಅಂತಿಮ ಗುರಿಯಲ್ಲ. ಶಿಕ್ಷಣವೆಂದರೆ ವ್ಯಕ್ತಿಯೊಳಗಿನ ಅರಿವಿನ ವಿಸ್ತರಣೆ ಹಾಗೂ ಸಮಾಜದಲ್ಲಿ ಜವಾಬ್ದಾರಿಯುತವಾಗಿ ಬದುಕುವ ಕಲಿಕೆಯಾಗಬೇಕು. ಮಹಿಳಾ ಶಿಕ್ಷಣವು ಕುಟುಂಬದ ಅಭಿವೃದ್ಧಿಗೆ ಮಾತ್ರವಲ್ಲದೆ ಇಡೀ ಸಮಾಜದ ಪ್ರಗತಿಗೂ ಕಾರಣವಾಗುತ್ತದೆ ಎಂದರು.

ಪ್ರಸೂತಿ ಹಾಗೂ ಹೆರಿಗೆ ತಜ್ಞೆ ಡಾ. ಗೀತಾ ಭರತ್ ಉತ್ತೂರ ಮಹಿಳೆ: ಶಿಕ್ಷಣ ಹಾಗೂ ಆರೋಗ್ಯ ವಿಷಯದ ಕುರಿತು ಉಪನ್ಯಾಸ ನೀಡಿ, ಕುಟುಂಬ ನಿರ್ವಹಣೆಯ ಒತ್ತಡದಲ್ಲಿ ಮಹಿಳೆಯರು ತಮ್ಮ ಆರೋಗ್ಯವನ್ನು ನಿರ್ಲಕ್ಷಿಸುತ್ತಿದ್ದಾರೆ. ಆರೋಗ್ಯವಾಗಿದ್ದಾಗ ಮಾತ್ರ ಜೀವನದಲ್ಲಿ ಸಾಧನೆ ಮಾಡಲು ಸಾಧ್ಯ ಎಂದರು.

ಮಹಿಳೆಯರು ತಮ್ಮ ಆರೋಗ್ಯವನ್ನು ನಿರ್ಲಕ್ಷಿಸಬಾರದು. ರಕ್ತಹೀನತೆ, ಖಿನ್ನತೆ, ಸುಸ್ತು, ಥೈರಾಯ್ಡ್ ಸಮಸ್ಯೆ ಹಾಗೂ ಋತುಚಕ್ರದ ಅಸಮತೆಯಂತಹ ಸಮಸ್ಯೆಗಳು ಕಂಡುಬಂದರೆ ನಿರ್ಲಕ್ಷಿಸದೆ ಸೂಕ್ತ ಚಿಕಿತ್ಸೆ ಪಡೆಯಬೇಕು. ಸಮತೋಲನ ಆಹಾರ, ನಿಯಮಿತ ದೈಹಿಕ ಚಟುವಟಿಕೆ ಹಾಗೂ ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಅಗತ್ಯ ಎಂದು ಸಲಹೆ ನೀಡಿದರು.

ವೇದಿಕೆಯಲ್ಲಿ ಆಡಳಿತ ಮಂಡಳಿ ಸದಸ್ಯ ಡಾ. ಜೆ.ಎಂ. ನಾಗಯ್ಯ ಹಾಗೂ ಆಡಳಿತಾಧಿಕಾರಿ ಎಸ್.ಕೆ. ಹೊಸಂಗಡಿ ಮಾತನಾಡಿದರು.

ಕಾಲೇಜಿನ ಪ್ರಾಚಾರ್ಯೆ ಪ್ರೊ. ರಾಜೇಶ್ವರಿ ಶೆಟ್ಟರ ಸ್ವಾಗತಿಸಿದರು. ಕ.ವಿ.ವ. ಸಂಘದ ಶಿಕ್ಷಣ ಮಂಟಪದ ಸಂಚಾಲಕ ವೀರಣ್ಣ ಒಡ್ಡೀನ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಅಶ್ವಿನಿ ಪಾಟೀಲ ಪರಿಚಯಿಸಿದರು. ಚೇತನ ಎಂ.ವ್ಹಿ. ನಿರೂಪಿಸಿದರು. ಡಾ. ದತ್ತಾ ಕಾಮಕರ ವಂದಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರು, ಉಪನ್ಯಾಸಕರು, ವಿಜಯಕುಮಾರ ಗಿಡ್ನವರ ದಂಪತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಶ್ರಾವಣ ಮಾಸದ ಅಂಗವಾಗಿ ಲಕ್ಕುಂಡಿಯಲ್ಲಿ ಶರಣರ ತತ್ವ ಚಿಂತನೆ ಪ್ರವಚನಕ್ಕೆ ಚಾಲನೆ

# ಶರಣರ ತತ್ವ ಚಿಂತನೆ ಯುವಕರ ಬದುಕಿಗೆ ದಾರಿದೀಪ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

12ನೇ ಶತಮಾನದ ಶಿವಶರಣರ ತತ್ವೋಪದೇಶಗಳು ಇಂದಿನ ಪೀಳಿಗೆಯ ಭವಿಷ್ಯ ರೂಪಿಸಲು ಸಹಕಾರಿಯಾಗಿದ್ದು, ಯುವಕರು ಶರಣರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಮುಂಡರಗಿ ಅನ್ನದಾನೀಶ್ವರ ಸಂಸ್ಥಾನಮಠದ ನಾಡೋಜ ಡಾ. ಅನ್ನದಾನೀಶ್ವರ ಮಹಾಸ್ವಾಮಿಗಳು ಹೇಳಿದರು.

ಲಕ್ಕುಂಡಿಯ ಅನ್ನದಾನೀಶ್ವರ ಶಾಖಾ ಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ಹಮ್ಮಿಕೊಂಡಿರುವ ಶರಣರ ತತ್ವ ಚಿಂತನೆ ಪ್ರವಚನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹರ್ಲಾಪೂರ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಮಾತನಾಡಿ, ಆಧುನಿಕ ವಿಜ್ಞಾನ ಮತ್ತು ತಂತ್ರಜ್ಞಾನದ ಯುಗದಲ್ಲಿ ನಿರ್ಮಾಣವಾಗುವ ಹಲವು ಸಿನಿಮಾಗಳು ಕೆಲವೇ ದಿನಗಳಲ್ಲಿ ಜನರ ನೆನಪಿನಿಂದ ಮರೆಯಾಗುತ್ತವೆ. ಆದರೆ 12ನೇ ಶತಮಾನದ ಶರಣರ ಜೀವನ ಚರಿತ್ರೆ, ಅವರು ನಡೆದ ದಾರಿ, ಮಾರ್ಗದರ್ಶನ, ನಿಸ್ವಾರ್ಥ ಸೇವೆ ಹಾಗೂ ಪ್ರಾಮಾಣಿಕತೆಯ ಕಥೆಗಳು ಇಂದಿಗೂ ಜನಮಾನಸದಲ್ಲಿ ಉಳಿದಿವೆ ಎಂದರು.

12ನೇ ಶತಮಾನದ ಶರಣರ ಜೀವನ ಚರಿತ್ರೆ, ಅವರು ನಡೆದು ಬಂದ ದಾರಿ, ಮಾರ್ಗದರ್ಶನ, ಅವರ ನಿಸ್ವಾರ್ಥ ಸೇವೆ ಹಾಗೂ ಪ್ರಾಮಾಣಿಕತೆಯ ಕಥೆಗಳು ಇಂದಿಗೂ ಜನಮಾನಸದಲ್ಲಿ ಉಳಿದುಕೊಂಡಿವೆ. ಈ ದಿಸೆಯಲ್ಲಿ ಪ್ರತಿಯೊಬ್ಬರೂ ಸಮಾಜಮುಖಿ ಕಾರ್ಯದಲ್ಲಿ ತೊಡಗಿಕೊಳ್ಳಬೇಕು ಎಂದು ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಹೇಳಿದರು.




> ಶರಣರು ತಾವು ನುಡಿದಂತೆ ನಡೆದು ಈ ಸಮಾಜಕ್ಕೆ ಇಂದಿಗೂ ಮಾದರಿಯಾಗಿದ್ದಾರೆ. ಅವರ ತತ್ವ, ನೀತಿ ಹಾಗೂ ಸಂಸ್ಕಾರಗಳು ಯುವಕರಿಗೆ ಸ್ಫೂರ್ತಿದಾಯಕವಾಗಿವೆ. ಶ್ರಾವಣ ಮಾಸದಲ್ಲಿ ಶರಣರ ತತ್ವ ಚಿಂತನೆ ಹಾಗೂ ಉಪದೇಶಗಳನ್ನು ಶ್ರವಣ ಮಾಡಬೇಕು.
> - ಡಾ. ಅನ್ನದಾನೀಶ್ವರ ಮಹಾಸ್ವಾಮಿಗಳು

ನಿವೃತ್ತ ಯೋಧ ದತ್ತಾತ್ರೇಯ ಜೋಶಿ ಮಾತನಾಡಿ, ಸನಾತನ ಧರ್ಮದ ಪ್ರತಿಯೊಂದು ಧಾರ್ಮಿಕ ಆಚರಣೆಗೂ ವೈಜ್ಞಾನಿಕ ಹಿನ್ನೆಲೆ ಇದೆ. ಶ್ರಾವಣ ಮಾಸದ ಆಚರಣೆಗೂ ವಿಶೇಷ ಅರ್ಥವಿದ್ದು, ಶರಣರ ತತ್ವ ಚಿಂತನೆಯ ಪ್ರವಚನದ ಮೂಲಕ ಅದರ ಮಹತ್ವವನ್ನು ತಿಳಿದುಕೊಳ್ಳಬಹುದು ಎಂದರು.

ಅಂಜುಮನ್ ಇಸ್ಲಾಂ ಕಮಿಟಿ ಅಧ್ಯಕ್ಷ ನಜೀರಅಹ್ಮದ್ ಕಿರಿಟಗೇರಿ ಮಾತನಾಡಿ, ಇಂದಿನ ಯುವಕರು ಧಾರ್ಮಿಕ ಕಾರ್ಯಕ್ರಮಗಳಿಂದ ವಿಮುಖರಾಗಿ ದುಶ್ಚಟಗಳಿಗೆ ಬಲಿಯಾಗುತ್ತಿರುವುದು ವಿಷಾದನೀಯ ಎಂದರು.

ಗದಗದ ಡಾ. ಗಿರಿಜಾ ಹಸಬಿ ಅವರು ಪ್ರವಚನ ಆರಂಭಿಸಿದರು. ಷಡಕ್ಷರಯ್ಯ ಬದ್ನಿಮಠ ಹಾಗೂ ವೀರಣ್ಣ ಕರಿಯಲ್ಲಪ್ಪನವರ ಸಂಗೀತ ಸೇವೆ ಸಲ್ಲಿಸಿದರು.

ಶಂಕ್ರಯ್ಯ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು. ಜಿ.ಪಂ. ಮಾಜಿ ಸದಸ್ಯ ಎಸ್.ಬಿ. ಕಲಕೇರಿ, ಗ್ರಾ.ಪಂ. ಮಾಜಿ ಸದಸ್ಯ ಬಸವರಾಜ ಯಲಿಶಿರುಂದ, ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ, ವೀರಯ್ಯ ಗಂಧದ, ನಿಂಗಪ್ಪ ಗುಂಜಳ, ಬಸಪ್ಪ ರೇವಡಿ, ಅಶೋಕ ಕಣವಿ, ಗಂಗಾಧರ ತಿಮ್ಮಾಪೂರ ಹಾಗೂ ಸೇವಾ ಸಮಿತಿ ಅಧ್ಯಕ್ಷ ಮುತ್ತಪ್ಪ ನೋಟಗಾರ ವೇದಿಕೆಯಲ್ಲಿದ್ದರು.

ಬಸವರಾಜ ಕಣವಿ ಸ್ವಾಗತಿಸಿದರು. ಅಮರೇಶ ಕರೆಕಲ್ಲ ನಿರೂಪಿಸಿದರು. ಶಿವಯೋಗಿ ಡಿಗ್ಗಾವಿ ವಂದಿಸಿದರು.

### ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ ಆರೋಪ; ಮರುಸಚಿವ ಸ್ಥಾನಕ್ಕೆ ತೀವ್ರ ವಿರೋಧ

# ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ

**ವಿಜಯಸಾಕ್ಷಿ ಸುದ್ದಿ, ಗದಗ**

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರಿಗೆ ಮತ್ತೆ ಸಚಿವ ಸ್ಥಾನ ನೀಡಿರುವುದನ್ನು ಖಂಡಿಸಿ ಹಾಗೂ ಅವರು ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ನಗರದ ಜಿಲ್ಲಾಡಳಿತ ಭವನದ ಎದುರು ಬುಧವಾರ ಪ್ರತಿಭಟನೆ ನಡೆಯಿತು.

ಬೆಳಗ್ಗೆಯಿಂದ ಸಂಜೆವರೆಗೆ ನಡೆದ ಪ್ರತಿಭಟನೆಯಲ್ಲಿ ಕಾಂಗ್ರೆಸ್ ಸರ್ಕಾರ ಹಾಗೂ ಸಚಿವ ಬಿ. ನಾಗೇಂದ್ರ ವಿರುದ್ಧ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ನಿಗಮದ ಹಣ ಬೇನಾಮಿ ಖಾತೆಗಳಿಗೆ ಅಕ್ರಮವಾಗಿ ವರ್ಗಾವಣೆಯಾಗಿದೆ ಎಂಬ ಆರೋಪ ಕೇಳಿಬಂದಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಿಗಮದ ಅಧಿಕಾರಿ ಆತ್ಮಹತ್ಯೆ ಮಾಡಿಕೊಂಡಿದ್ದು, ಡೆತ್ ನೋಟ್‌ನಲ್ಲಿಯೂ ಹಣ ವರ್ಗಾವಣೆಯ ಕುರಿತು ಉಲ್ಲೇಖವಾಗಿತ್ತು.

ಬಿಜೆಪಿ ನಡೆಸಿದ ಹೋರಾಟದ ಹಿನ್ನೆಲೆಯಲ್ಲಿ ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಪ್ರಕರಣದ ತನಿಖೆ ಹಾಗೂ ಆರೋಪಗಳು ಇನ್ನೂ ಚರ್ಚೆಯಲ್ಲಿರುವಾಗಲೇ ಅವರಿಗೆ ಮತ್ತೆ ಸಚಿವ ಸ್ಥಾನ ನೀಡಿರುವುದು ಖಂಡನೀಯ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ನಿಗಮದ ಹಣದ ಅಕ್ರಮದಲ್ಲಿ ಸಚಿವ ನಾಗೇಂದ್ರ ಅವರ ಪಾತ್ರದ ಕುರಿತು ಗಂಭೀರ ಆರೋಪಗಳು ಕೇಳಿಬಂದಿದ್ದರೂ, ಅವರನ್ನು ಮತ್ತೆ ಸಚಿವರನ್ನಾಗಿ ಮಾಡಿರುವುದು ಕಾಂಗ್ರೆಸ್ ಸರ್ಕಾರದ ಆಡಳಿತ ವೈಖರಿಗೆ




> ವಾಲ್ಮೀಕಿ ಸಮುದಾಯದ ಅಭಿವೃದ್ಧಿಗಾಗಿ ಮೀಸಲಾದ ಹಣದ ಅಕ್ರಮದಿಂದ ಆ ಸಮಾಜಕ್ಕೆ ಅನ್ಯಾಯವಾಗಿದೆ. ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವವರೆಗೆ ನಮ್ಮ ಹೋರಾಟ ಮುಂದುವರಿಯಲಿದೆ.
> – ರಾಜು ಕುರಡಗಿ,
> ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ

ಸಾಕ್ಷಿಯಾಗಿದೆ ಎಂದು ಬಿಜೆಪಿ ಮುಖಂಡರು ಆರೋಪಿಸಿದರು. ವಾಲ್ಮೀಕಿ ಸಮುದಾಯದ ಅಭಿವೃದ್ಧಿಗಾಗಿ ಮೀಸಲಾದ ಹಣದ ಅಕ್ರಮದಿಂದ ಆ ಸಮಾಜಕ್ಕೆ ಅನ್ಯಾಯವಾಗಿದೆ.

ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವವರೆಗೆ ಬಿಜೆಪಿ ಜನಪ್ರತಿನಿಧಿಗಳು ವಿಧಾನಮಂಡಲ ಅಧಿವೇಶನ ಸುಗಮವಾಗಿ ನಡೆಯಲು ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಜನರ ತೆರಿಗೆ ಹಣವನ್ನು ಸಮರ್ಪಕವಾಗಿ ಬಳಸುತ್ತಿಲ್ಲ. ಭ್ರಷ್ಟಾಚಾರದ ಆರೋಪಗಳು ಸರ್ಕಾರವನ್ನು ಸುತ್ತುವರಿದಿದ್ದು, ಆಡಳಿತದಲ್ಲಿ ಅರಾಜಕತೆ ತಾಂಡವವಾಡುತ್ತಿದೆ. ರಾಜ್ಯದಲ್ಲಿ ತುಘಲಕ್ ಸರ್ಕಾರದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಪ್ರತಿಭಟನಾಕಾರರು ಟೀಕಿಸಿದರು.

ಪಂಚ ಗ್ಯಾರಂಟಿ ಯೋಜನೆಗಳ ಪ್ರಯೋಜನ ಎಲ್ಲ ವರ್ಗದ ಜನರನ್ನು ಸಮರ್ಪಕವಾಗಿ ತಲುಪುತ್ತಿಲ್ಲ. ಸರ್ಕಾರ ಒಂದು ಕೋಮಿನ ಓಲೈಕೆಗೆ ಆದ್ಯತೆ ನೀಡುತ್ತಿದೆ ಎಂಬ ಆರೋಪವನ್ನೂ ಬಿಜೆಪಿ ಮುಖಂಡರು ಮಾಡಿದರು. ಕಾಂಗ್ರೆಸ್ ಸರ್ಕಾರದ ಆಡಳಿತದಿಂದ ಜನರು ಬೇಸರಗೊಂಡಿದ್ದು, ಮುಂದಿನ ಚುನಾವಣೆಯಲ್ಲಿ ಬಿಜೆಪಿಗೆ ಸ್ಪಷ್ಟ ಬಹುಮತ ದೊರೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ರಾಘವೇಂದ್ರ ಯಳವತ್ತಿ, ವಿನಾಯಕ ಮಾನ್ವಿ, ವಿಜಯಕುಮಾರ ಗಡ್ಡಿ, ಸಿದ್ದಣ್ಣ ಪಲ್ಲೇದ, ಹೇಮಗಿರೀಶ ಹಾವಿನಾಳ, ಐ.ಎಸ್. ಪೂಜಾರ, ನಾಗರಾಜ ತಳವಾರ, ಅನಿಲ್ ಅಬ್ಬಿಗೇರಿ, ನಿರ್ಮಲಾ ಕೊಳ್ಳಿ, ವಂದನಾ ವೆರ್ಣೇಕರ ಸೇರಿದಂತೆ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಅಡುಗೆ ಸ್ಪರ್ಧೆಯಲ್ಲಿ ಶೈಲಜಾ ಹೆಗಡೆ, ದೀಪಾ ಉಗಲಾಟ ಪ್ರಥಮ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ ಹಾಗೂ ಜಿಲ್ಲಾ ಪಂಚಾಯಿತಿ ಆಶ್ರಯದಲ್ಲಿ ಎಪಿಎಂಸಿ ಯಾಡ್‌ನ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ನಡೆಯುತ್ತಿರುವ ಗದಗ ಉತ್ಸವದ ಅಂಗವಾಗಿ ಮಹಿಳೆಯರಿಗಾಗಿ ಅಡುಗೆ ಸ್ಪರ್ಧೆ ಆಯೋಜಿಸಲಾಗಿತ್ತು. ಹಲಸಿನ ಹಣ್ಣು ಹಾಗೂ ಬಾಳೆಹಣ್ಣಿನ ಸಿಹಿ ಪದಾರ್ಥ ಮತ್ತು ಜೋಳ ಹಾಗೂ ಜೋಳದ ಹಿಟ್ಟಿನ ಖಾರದ ಪದಾರ್ಥ ತಯಾರಿಕೆಯ ಎರಡು ವಿಭಾಗಗಳಲ್ಲಿ ನಡೆದ ಸ್ಪರ್ಧೆಯಲ್ಲಿ 60ಕ್ಕೂ ಹೆಚ್ಚು ಮಹಿಳೆಯರು ಭಾಗವಹಿಸಿದ್ದರು.

ಸಿಹಿ ಪದಾರ್ಥ ವಿಭಾಗದಲ್ಲಿ ಶೈಲಜಾ ಹೆಗಡೆ ಪ್ರಥಮ, ರಾಜೇಶ್ವರಿ ಅಂಗಡಿ ದ್ವಿತೀಯ ಹಾಗೂ ಗೀತಾ ಹೆಗಡೆ ತೃತೀಯ ಸ್ಥಾನ ಪಡೆದರು. ಸಂಜನಾ ಮಲ್ಲಾಡದ ಅವರಿಗೆ ವಿಶೇಷ



ಬಹುಮಾನ ದೊರೆಯಿತು. ಖಾರದ ಪದಾರ್ಥ ವಿಭಾಗದಲ್ಲಿ ದೀಪಾ ಉಗಲಾಟ ಪ್ರಥಮ, ನಯನಾ ಮಲ್ಲಾಡದ ದ್ವಿತೀಯ ಹಾಗೂ ಕಲಾವತಿ ಹಿರೇಮಠ ತೃತೀಯ ಸ್ಥಾನ ಪಡೆದರು. ಶಿಲ್ಪಾ ರಾಯ್ಕರ್ ವಿಶೇಷ ಬಹುಮಾನ ಪಡೆದರು. ಕೃಷಿ ಇಲಾಖೆಯ ಉಪನಿರ್ದೇಶಕಿ ಸ್ಮೃತಿ ಬಿ.ಎಸ್. ಹಾಗೂ ಡಾ. ರಾಧಿಕಾ ಕುಲಕರ್ಣಿ ನಿರ್ಣಾಯಕರಾಗಿದ್ದರು. ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ಅಧ್ಯಕ್ಷೆ ಜ್ಯೋತಿ ದಾನಪ್ಪಗೌಡ್ರ ಅಧ್ಯಕ್ಷತೆ ವಹಿಸಿದ್ದರು. ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಪ್ರಮಾಣಪತ್ರ ಹಾಗೂ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

## ಸಂಕ್ಷಿಪ್ತ ಸುದ್ದಿಗಳು

### ಮೂರು ವೃತ್ತಗಳಿಗೆ ನಾಮಕರಣ: ಆಕ್ಷೇಪಣೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಪಟ್ಟಣದ ವಿವಿಧ ವೃತ್ತಗಳಿಗೆ ನಾಮಕರಣ ಮಾಡುವ ಸಂಬಂಧ ಮುಂಡರಗಿ ಪುರಸಭೆಯಿಂದ ಸಾರ್ವಜನಿಕರಿಂದ ಆಕ್ಷೇಪಣೆ ಹಾಗೂ ತಕರಾರುಗಳನ್ನು ಆಹ್ವಾನಿಸಲಾಗಿದೆ. ಗದಗ ಜಿಲ್ಲಾ ಛಲವಾದಿ ಮಹಾಸಭಾ ತಾಲೂಕು ಘಟಕ, ಮುಂಡರಗಿ ಹಾಗೂ ಸಂಘದ ಪದಾಧಿಕಾರಿಗಳು ಪಟ್ಟಣದ ಒಂದು ವೃತ್ತಕ್ಕೆ ವೀರ ವನಿತೆ ಒನಕೆ ಓಬವ್ವ ವೃತ್ತ ಎಂದು ನಾಮಕರಣ ಮಾಡುವಂತೆ ಅರ್ಜಿ ಸಲ್ಲಿಸಿದ್ದಾರೆ.

ಅದೇ ರೀತಿ, ಅಖಿಲ ಕರ್ನಾಟಕ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘ (ರಿ), ಬೆಂಗಳೂರು ರಾಜ್ಯಾಧ್ಯಕ್ಷ ದೇವಪ್ಪ ಕೃಷ್ಣಪ್ಪ ಹಡಪದ ಅವರು ಒಂದು ವೃತ್ತಕ್ಕೆ ಶ್ರೀ ಶಿವಶರಣ ಹಡಪದ ಅಪ್ಪಣ್ಣ ವೃತ್ತ ಎಂದು ನಾಮಕರಣ ಮಾಡುವಂತೆ ಮನವಿ ಮಾಡಿದ್ದಾರೆ.

ವಿಶ್ವ ಕನ್ನಡ ರಕ್ಷಣಾ ವೇದಿಕೆ, ಮುಂಡರಗಿ ತಾಲೂಕು ಮಹಿಳಾ ಅಧ್ಯಕ್ಷೆ ಮಧುಮತಿ ಮಡಿವಾಳರ ಅವರು ಮತ್ತೊಂದು ವೃತ್ತಕ್ಕೆ ಕರ್ನಾಟಕ ರತ್ನ ಡಾ. ರಾಜಕುಮಾರ್ ವಿಶ್ವ ಕನ್ನಡ ರಕ್ಷಣಾ ವೇದಿಕೆ ವೃತ್ತ ಎಂದು ನಾಮಕರಣ ಮಾಡುವಂತೆ ಅರ್ಜಿ ಸಲ್ಲಿಸಿದ್ದಾರೆ.

ಈ ಕುರಿತು ಆಡಳಿತಾಧಿಕಾರಿಗಳ ಸಭೆಯಲ್ಲಿ ಚಆರ್‌ಸಿ ಠರಾವು ಮಾಡಲಾಗಿದ್ದು, ಪ್ರಸ್ತಾವಿತ ನಾಮಕರಣಕ್ಕೆ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆ ಅಥವಾ ತಕರಾರುಗಳಿದ್ದಲ್ಲಿ, ಪ್ರಕಟಣೆ ಹೊರಡಿಸಿದ ದಿನಾಂಕದಿಂದ 30 ದಿನಗಳೊಳಗಾಗಿ ಸೂಕ್ತ ದಾಖಲೆಗಳೊಂದಿಗೆ ಲಿಖಿತ ರೂಪದಲ್ಲಿ ಆಕ್ಷೇಪಣೆ ಅಥವಾ ತಕರಾರು ಅರ್ಜಿಯನ್ನು ಮುಂಡರಗಿ ಪುರಸಭೆ ಕಾರ್ಯಾಲಯಕ್ಕೆ ಸಲ್ಲಿಸಬೇಕು ಎಂದು ತಿಳಿಸಲಾಗಿದೆ.

ನಿಗದಿತ ಅವಧಿ ಮುಗಿದ ಬಳಿಕ ಸಲ್ಲಿಕೆಯಾಗುವ ಆಕ್ಷೇಪಣೆ ಅಥವಾ ತಕರಾರುಗಳನ್ನು ಪರಿಗಣಿಸಲಾಗುವುದಿಲ್ಲ. ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗದಿದ್ದರೆ, ಸರ್ಕಾರದ ಸಂಬಂಧಿತ ಸುತ್ತೋಲೆ ಹಾಗೂ ನಿಯಮಗಳನ್ವಯ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಮುಂಡರಗಿ ಪುರಸಭೆ ಕಾರ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

### ಸಮುದಾಯ ಲೆಕ್ಕಪರಿಶೋಧಕರ ಆಯ್ಕೆಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯಡಿ ಸ್ವ-ಸಹಾಯ ಗುಂಪುಗಳು ಹಾಗೂ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳ ಆಂತರಿಕ ಲೆಕ್ಕಪರಿಶೋಧನೆ ನಡೆಸಲು 13 ಸಮುದಾಯ ಲೆಕ್ಕಪರಿಶೋಧಕರನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದ್ದು, ಅರ್ಜಿ ಆಹ್ವಾನಿಸಲಾಗಿದೆ.
ಸ್ವ-ಸಹಾಯ ಗುಂಪಿನ ಮಹಿಳಾ ಸದಸ್ಯರು ಅಥವಾ ಅವರ ಹೆಣ್ಣು ಮಕ್ಕಳಿಗೆ ಮೊದಲ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳು ಬಿ.ಕಾಂ., ಎಂ.ಕಾಂ., ಬಿಬಿಎ ಅಥವಾ ಎಂ.ಬಿಎ (ಫೈನಾನ್ಸ್) ವಿದ್ಯಾರ್ಹತೆ ಹೊಂದಿರಬೇಕು.
ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದ್ದು, ಅರ್ಜಿ ನಮೂನೆ ಪಡೆದು ಆಯಾ ತಾಲೂಕು ಅಭಿಯಾನ ನಿರ್ವಹಣಾ ಘಟಕದ ಎನ್‌ಆರ್‌ಎಲ್‌ಎಂ ವಿಭಾಗಕ್ಕೆ ಖುದ್ದಾಗಿ ಸಲ್ಲಿಸಬೇಕು.
ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕು ಪಂಚಾಯಿತಿ ಕಚೇರಿಗಳನ್ನು ಸಂಪರ್ಕಿಸುವಂತೆ ಗದಗ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

## ಮಲೇರಿಯಾ, ಡೆಂಗ್ಯೂ ಸೇರಿ ಸೊಳ್ಳೆಗಳಿಂದ ಹರಡುವ ರೋಗ ತಡೆಗೆ ಜನಜಾಗೃತಿ ಅಗತ್ಯ

# ಸೊಳ್ಳೆ ನಿಯಂತ್ರಣ ಸಮುದಾಯದ ಹೊಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಮಲೇರಿಯಾ, ಡೆಂಗ್ಯೂ, ಚಿಕೂನ್‌ಗುನ್ಯಾ, ಆನೆಕಾಲು ಸೇರಿದಂತೆ ಹಲವು ರೋಗಗಳ ಹರಡುವಿಕೆಗೆ ಕಾರಣವಾಗುವ ಸೊಳ್ಳೆಗಳ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಸೊಳ್ಳೆ ನಿಯಂತ್ರಣ ಜನರ ಸಾಮೂಹಿಕ ಹೊಣೆಗಾರಿಕೆಯಾಗಿ ರೂಪುಗೊಳ್ಳಬೇಕು ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ ಹೇಳಿದರು.

ಅಡವಿ ಸೋಮಾಪುರದ ಆಯುಷ್ಮಾನ್ ಆರೋಗ್ಯ ಮಂದಿರದಲ್ಲಿ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಲಕ್ಕುಂಡಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಆಯುಷ್ಮಾನ್ ಆರೋಗ್ಯ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಗುರುವಾರ ನಡೆದ ತಾಲೂಕು ಮಟ್ಟದ ವಿಶ್ವ ಸೊಳ್ಳೆ ದಿನಾಚರಣೆ ಹಾಗೂ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು




ಮಾತನಾಡಿದರು.

ಗದಗ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಎಸ್. ಗಡಾದ ಮಾತನಾಡಿ, ಸೊಳ್ಳೆಗಳು ಗಾತ್ರದಲ್ಲಿ ಚಿಕ್ಕದಾದರೂ ಮನುಕುಲದ ಮೇಲೆ ದೊಡ್ಡ ಅಪಾಯವನ್ನುಂಟುಮಾಡುತ್ತವೆ. ಸರ್ ರೊನಾಲ್ಡ್ ರಾಸ್ ಅವರ ಸಂಶೋಧನೆಯಿಂದ ಸೊಳ್ಳೆಗಳ ಮೂಲಕ ಮಲೇರಿಯಾ ಹರಡುವುದು ಪತ್ತೆಯಾದ ಹಿನ್ನೆಲೆಯಲ್ಲಿ ಅವರ ಸ್ಮರಣಾರ್ಥ ಆಗಸ್ಟ್ 20ರಂದು ವಿಶ್ವ ಸೊಳ್ಳೆ ದಿನ ಆಚರಿಸಲಾಗುತ್ತಿದೆ. ಸೊಳ್ಳೆಗಳಿಂದ ಹರಡುವ ರೋಗಗಳ ನಿಯಂತ್ರಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಯಲ್ಲಪ್ಪ ಹಕ್ಕಿ ಸೊಳ್ಳೆಗಳಿಂದ ಹರಡುವ ರೋಗಗಳ ಲಕ್ಷಣಗಳು ಹಾಗೂ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ಗುರುತಿಸುವ ವಿಧಾನಗಳ ಕುರಿತು ಮಾಹಿತಿ ನೀಡಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದಪ್ಪ ಲಿಂಗದಾಳ ಸೊಳ್ಳೆ ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿಯರು, ಗರ್ಭಿಣಿಯರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

> ಸೊಳ್ಳೆಗಳ ನಿಯಂತ್ರಣ ನಿಮ್ಮಿಂದ, ನಿಮಗಾಗಿ, ನಿಮ್ಮ ಮನೆಯ ಬಾಗಿಲಲ್ಲೇ ಆರಂಭವಾಗಬೇಕು. ಸೊಳ್ಳೆ ನಿಯಂತ್ರಣ ಸಮುದಾಯದ ಮಾತಾಗಬೇಕು.
> - ಡಾ. ಪ್ರೀತ್ ಖೋನಾ, ತಾಲೂಕು ಆರೋಗ್ಯಾಧಿಕಾರಿ

## ಶರಣೆಯರ ದಿವ್ಯ ಜ್ಞಾನ ಸಂದೇಶ ಚಿರಸ್ಥಾಯಿ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

12ನೇ ಶತಮಾನದಲ್ಲಿ ಶಿವಶರಣೆಯರಾದ ಅಕ್ಕಮಹಾದೇವಿ, ಸತ್ಯಕ್ಕ, ಹೇಮರೆಡ್ಡಿ ಮಲ್ಲಮ್ಮ ಹಾಗೂ ಆಯ್ದಕ್ಕಿ ಲಕ್ಕಮ್ಮ ಅವರು ನೀಡಿದ ದಿವ್ಯ ಜ್ಞಾನದ ಸಂದೇಶಗಳು ಸದಾಕಾಲ ಚಿರಸ್ಥಾಯಿಯಾಗಿದ್ದು, ಅವುಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಪಾಲಿಸಬೇಕು ಎಂದು ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ.ಕೆ. ಲಮಾಣಿ ಹೇಳಿದರು.

ಶಿರಹಟ್ಟಿ ಪಟ್ಟಣದ ಯಲ್ಲಪ್ಪಗೌಡ್ರ ಪಾಟೀಲ ಅವರ ಮಹಾಮನೆಯಲ್ಲಿ ಆಯೋಜಿಸಿದ್ದ ಶ್ರಾವಣ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶರಣರು ವಚನಗಳ ಮೂಲಕ ಸಮಾಜಕ್ಕೆ ನೀಡಿದ ದಿವ್ಯ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ.

ಇಂದಿನ ಯುವಕರು ವಚನಗಳ ಆಶಯಗಳನ್ನು ಅರಿತು ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಹಾಗೂ ಸುಂದರ ಸಮಾಜ ನಿರ್ಮಾಣಕ್ಕೆ ಕಾರಣೀಭೂತರಾಗಬೇಕು.

ಈ ಉದ್ದೇಶದಿಂದ ತಾಲೂಕು ಶರಣ ಸಾಹಿತ್ಯ ಪರಿಷತ್ ವತಿಯಿಂದ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಜಯಶ್ರೀ ಯಲ್ಲಪ್ಪಗೌಡ್ರ ಪಾಟೀಲ, ಅಜ್ಜುಗೌಡ ಪಾಟೀಲ, ಎಚ್.ಡಿ. ಮಾಗಡಿ, ಡಾ. ಎಸ್.ಎಂ. ಬುರಬರೆ, ಕೆ.ಎ. ಬಳಿಗೇರ, ಬೂದಪ್ಪ ಅಂಗಡಿ, ಡಿ.ಎಸ್. ಬಾಪೂರೆ, ಪ್ರಕಾಶ ಭೋರಶೆಟ್ಟರ, ಪುನೀತ ಓಲೇಕಾರ, ನಂದಕ್ಕ ಕಪ್ಪತ್ತನವರ, ಸಿ.ಸಿ. ನೂರಶೆಟ್ಟರ, ಎಂ.ಎ. ಮಕಾನದಾರ, ವೆಂಕಟೇಶ ಅರ್ಕಸಾಲಿ, ಎಚ್.ಎಂ. ದೇವಗಿರಿ, ಹೊನ್ನಪ್ಪ ಪಲ್ಲೇದ, ಪಿ.ಎಲ್. ಭಂತಿ, ಗಿರೀಶ ಚಿಂಚಲಿ, ವಾಸುದೇವ ಕಲಾಲ, ಬಿ.ಎಸ್. ಮುಗುಳಿ, ಮೋಹನ ಮಾಂಡ್ರೆ, ಬಸವಣ್ಣೆಪ್ಪ ತುಳಿ, ಬಸವರಾಜ ಹೊಸೂರ, ಮುತ್ತು ಕಪ್ಪತ್ತನವರ, ಗೋವಿಂದೇಗೌಡ, ಪರಮೇಶ ಪರಬ, ನಂದಾ ಪಲ್ಲೇದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪ್ರಕಲ್ಪ ಶಾಲೆಯಲ್ಲಿ ಶ್ವೇತ ಬಣ್ಣದ ದಿನಾಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಆನಂದ ಆಶ್ರಮ ರಸ್ತೆಯಲ್ಲಿರುವ ಪ್ರಕಲ್ಪ ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಗುರುವಾರ (ಆ.20) ಶ್ವೇತ ಬಣ್ಣದ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಶಿಕ್ಷಕರು ವಿದ್ಯಾರ್ಥಿಗಳಿಗೆ ಶ್ವೇತ ಬಣ್ಣದ ಮಹತ್ವವನ್ನು ತಿಳಿಸಿದರು. ಬಿಳಿ ಬಣ್ಣವು ಶಾಂತಿ, ಪರಿಶುದ್ಧತೆ ಹಾಗೂ ಸಕಾರಾತ್ಮಕತೆಯ ಸಂಕೇತವಾಗಿದೆ. ಬಣ್ಣಗಳು ನಮ್ಮ ಜೀವನದಲ್ಲಿ ಸಂತೋಷ ಮತ್ತು ಉಲ್ಲಾಸವನ್ನು ಹೆಚ್ಚಿಸುವುದರ ಜೊತೆಗೆ ಪ್ರಕೃತಿಯ ಸೌಂದರ್ಯವನ್ನೂ ಹೆಚ್ಚಿಸುತ್ತವೆ ಎಂದು ಶಿಕ್ಷಕರು ಹೇಳಿದರು.

ವಿದ್ಯಾರ್ಥಿಗಳು ಶ್ವೇತ ಬಣ್ಣಕ್ಕೆ ಸಂಬಂಧಿಸಿದ ವಿವಿಧ ವಸ್ತುಗಳನ್ನು ಗುರುತಿಸುವ ಚಟುವಟಿಕೆಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡರು. ಬಿಳಿ ಬಣ್ಣದ ಉಡುಪುಗಳನ್ನು ಧರಿಸಿ ವಿದ್ಯಾರ್ಥಿಗಳು ದಿನಾಚರಣೆಯಲ್ಲಿ ಸಂಭ್ರಮದಿಂದ ಭಾಗವಹಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಅಂಗನವಾಡಿಯಲ್ಲೇ ಎಲ್‌ಕೆಜಿ, ಯುಕೆಜಿ: ಮಕ್ಕಳಿಗೆ ಹೊಸ ಕಲಿಕೆಯ ಆರಂಭ



**ವಿಜಯಸಾಕ್ಷಿ ಸುದ್ದಿ, ನರಗುಂದ**

ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನೆ ನರಗುಂದ ವತಿಯಿಂದ ಸರ್ಕಾರಿ ಪೂರ್ವ ಪ್ರಾಥಮಿಕ ಶಿಕ್ಷಣ ಆರಂಭಿಸುವ ಯೋಜನೆಯಡಿ ಸರಸ್ವತಿ ನಗರದ ನರಗುಂದ-87ನೇ ಅಂಗನವಾಡಿ ಕೇಂದ್ರದಲ್ಲಿ ಎಲ್‌ಕೆಜಿ ಹಾಗೂ ಯುಕೆಜಿ ತರಗತಿಗಳಿಗೆ ಚಾಲನೆ ನೀಡಲಾಯಿತು.

ಸರಸ್ವತಿ ಪೂಜೆ ನೆರವೇರಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು. ಬಾಲ ವಿಕಾಸ ಸಮಿತಿ ಅಧ್ಯಕ್ಷೆ ಲಕ್ಷ್ಮೀ ಸಂಗಳಮಠ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಅಂಗನವಾಡಿ ಕೇಂದ್ರಗಳಲ್ಲಿ ಎಲ್‌ಕೆಜಿ ಹಾಗೂ ಯುಕೆಜಿ ಆರಂಭಿಸಿರುವುದರಿಂದ 4ರಿಂದ 6 ವರ್ಷದ ಮಕ್ಕಳಿಗೆ ಹೊಸ ಕಲಿಕೆಯ ಅವಕಾಶ ದೊರೆತಿದೆ. ಮಕ್ಕಳಲ್ಲಿ ಶಿಸ್ತು ಬೆಳೆಸಲು ಸಮವಸ್ತ್ರ, ಕಲಿಕಾ ಪುಸ್ತಕ, ವಾಟರ್ ಬಾಟಲ್ ಹಾಗೂ ಸ್ಕೂಲ್ ಬ್ಯಾಗ್‌ಗಳನ್ನು ಒದಗಿಸಲಾಗುತ್ತಿದ್ದು, ಟಿ.ವಿ. ಮೂಲಕ ಮನರಂಜನೆಯೊಂದಿಗೆ ಶಿಕ್ಷಣ ನೀಡುತ್ತಿರುವುದು ವಿಶೇಷವಾಗಿದೆ ಎಂದು ಮೇಲ್ವಿಚಾರಕಿ ಭಾರತಿ ಕಾಲಚೆಟ್ಟಿ ಹೇಳಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೆಂಕಪ್ಪ ಗಿರಿತಿಮ್ಮಣ್ಣವರ ಮಾತನಾಡಿ, ಅಂಗನವಾಡಿ ಕೇಂದ್ರಗಳಲ್ಲೇ ಪೂರ್ವ ಪ್ರಾಥಮಿಕ ಶಿಕ್ಷಣ ಆರಂಭಿಸಿರುವುದು ಅಂಗನವಾಡಿಗಳ ಬಲವರ್ಧನೆಗೆ ಸಹಕಾರಿಯಾಗಲಿದೆ. ಇಲಾಖೆಯ ಭಾಗ್ಯಲಕ್ಷ್ಮೀ, ಸುಕನ್ಯಾ ಸಮೃದ್ಧಿ, ಪ್ರಧಾನಮಂತ್ರಿ ಮಾತೃವಂದನಾ, ಪೋಷಣ್ ಅಭಿಯಾನ ಹಾಗೂ ಮಾತೃಪೂರ್ಣ ಯೋಜನೆಗಳ ಕುರಿತು ಮಾಹಿತಿ ನೀಡಿದರು. ಬಾಲ್ಯವಿವಾಹ ತಡೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದ ಅಂಗವಾಗಿ ಮೊದಲ ಗರ್ಭಿಣಿ ಮಹಿಳೆಗೆ ಸೀಮಂತ ಹಾಗೂ ಆರು ತಿಂಗಳು ಪೂರ್ಣಗೊಳಿಸಿದ ಮಗುವಿಗೆ ಅನ್ನಪ್ರಾಶನ ಕಾರ್ಯಕ್ರಮ ನೆರವೇರಿಸಲಾಯಿತು.

ನಿವೃತ್ತ ಶಿಕ್ಷಕರಾದ ಬಿ.ಎ. ಕುರಿ, ಎಸ್.ಎನ್. ಕರಮುಡಿ, ಎಸ್.ಬಿ. ಚೆನ್ನವೀರಗೌಡ್ರ, ಲಲಿತಾ ದೊಡ್ಡಮನಿ, ಹಿರಿಯರಾದ ಭರಮಪ್ಪ ಪೂಜಾರ, ಪೋಷಣ್ ಅಭಿಯಾನ ಕಾರ್ಯಕ್ರಮ ಸಂಯೋಜಕ ಮಂಜುನಾಥ ಗುಗ್ಗರಿ, ಅಂಗನವಾಡಿ ಕಾರ್ಯಕರ್ತೆ ಕೆ.ಡಿ. ಚಕ್ರಸಾಲಿ ಸೇರಿದಂತೆ ಮಕ್ಕಳ ಪಾಲಕರು ಹಾಗೂ ಅಂಗನವಾಡಿ ಸಿಬ್ಬಂದಿ ಉಪಸ್ಥಿತರಿದ್ದರು.

## ದ್ಯಾಮವ್ವ-ದುರ್ಗಮ್ಮ ದೇವಿಯರ ಹರಿಜಾತ್ರೆಗೆ ಅದ್ದೂರಿ ಚಾಲನೆ

# ಕಷ್ಟದಲ್ಲಿರುವವರಿಗೆ ನೆರವಾಗುವುದೇ ನಿಜವಾದ ಧರ್ಮ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಒಕ್ಕಲಗೇರಿ ಓಣಿಯ ಗ್ರಾಮ ದೇವತೆಗಳಾದ ಶ್ರೀ ದ್ಯಾಮವ್ವ ಹಾಗೂ ಶ್ರೀ ದುರ್ಗಮ್ಮ ದೇವಿಯರ ಹರಿಜಾತ್ರಾ ಮಹೋತ್ಸವದ ಮೊದಲ ದಿನದ ಸಭಾ ಕಾರ್ಯಕ್ರಮ ಭಕ್ತಿಭಾವದಿಂದ ನಡೆಯಿತು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಹೊಸಳ್ಳಿ ಬೂದೀಶ್ವರ ಮಠದ ಪೂಜ್ಯ ಅಭಿನವ ಜಗದ್ಗುರು ಬೂದೀಶ್ವರ ಮಹಾಸ್ವಾಮಿಗಳು ಮಾತನಾಡಿ, ಹುಟ್ಟು-ಸಾವು ಪ್ರಕೃತಿಯ ನಿಯಮವಾಗಿದ್ದು, ಇವೆರಡರ ನಡುವಿನ ಬದುಕನ್ನು ಸಾರ್ಥಕಪಡಿಸಿಕೊಳ್ಳುವುದು ಮನುಷ್ಯನ ಕರ್ತವ್ಯ ಎಂದರು.

ಮನುಷ್ಯನಿಗೆ 84 ಲಕ್ಷ ಜೀವ ರಾಶಿಗಳಿಗಿಂತ ಭಿನ್ನವಾದ ಅರಿವಿನ ಶಕ್ತಿ ದೊರೆತಿದೆ. ಈ ಅರಿವನ್ನು ಸದುಪಯೋಗಪಡಿಸಿಕೊಂಡು ಮಾನವ ಜನ್ಮವನ್ನು ಸಾರ್ಥಕಗೊಳಿಸಬೇಕು. ದೇವರು ನಾವು ಮಾಡುವ ಪೂಜೆಯನ್ನು ಮಾತ್ರ ನೋಡುವುದಿಲ್ಲ; ನಾವು ಮಾಡುವ ಉತ್ತಮ ಕಾರ್ಯಗಳನ್ನು ಖಂಡಿತ ನೋಡುತ್ತಾನೆ. ದುಷ್ಟ ಆಲೋಚನೆಗಳನ್ನು ದೂರ ಮಾಡಿ ಪ್ರವಚನ ಆಲಿಸುವ ಮೂಲಕ ಹರಿಜಾತ್ರೆಯನ್ನು ಸಾರ್ಥಕಗೊಳಿಸಬೇಕು ಎಂದು ಅವರು ಕರೆ ನೀಡಿದರು.

ಉಪನ್ಯಾಸಕರಾಗಿ ಆಗಮಿಸಿದ್ದ ಡಾ. ಸಿದ್ಧವೀರ



ಮಹಾಸ್ವಾಮಿಗಳು ಗುರುಸಿದ್ದಯ್ಯ ಹಿರೇಮಠ ಮಾತನಾಡಿ, ದ್ಯಾಮವ್ವದುರ್ಗಮ್ಮ ದೇವಿಯರ ಹರಿಜಾತ್ರೆ, ಹರಕೆ ತೀರಿಸುವ ಪವಿತ್ರ ದಿನವಾಗಿದೆ ಎಂದರು. ರಕ್ತಬೀಜಾಸುರನ ಸಂಹಾರ ಮಾಡಿ ಶ್ರೀದೇವಿ ಜಗಜ್ಜನನಿಯಾಗಿ ಹೊರಹೊಮ್ಮಿದ ಪರಂಪರೆಯನ್ನು ವಿವರಿಸಿದರು.

ಮನುಷ್ಯನ ಬದುಕಿನಲ್ಲಿ ವಿವಿಧ ರೀತಿಯ ಸುಖಗಳನ್ನು ಕಾಣಬಹುದು. ದೇವಸ್ಥಾನದಲ್ಲಿ ದರ್ಶನ ಪಡೆದ ಬಳಿಕ ನೀಡುವ ಬಾಳೆಹಣ್ಣಿನ ಪ್ರಸಾದದ ಸಿಪ್ಪೆ ತೆಗೆದು ಸೇವಿಸುವ ಮೂಲಕ ಒಳಗಿನ ಸುಖವನ್ನು, ಜಾತ್ರೆಯಲ್ಲಿ ಉತ್ತತ್ತಿ ಎಸೆದು ಮರಳಿ ಪಡೆದು ಸೇವಿಸುವ ಮೂಲಕ ಹೊರಗಿನ ಸುಖವನ್ನು ಹಾಗೂ ಮಠಾಧೀಶರಿಂದ ಆಶೀರ್ವಾದ ಪಡೆದು ನೀಡುವ ಕಲ್ಲುಸಕ್ಕರೆಯನ್ನು ಸೇವಿಸುವ ಮೂಲಕ ಪೂರ್ಣ ಸುಖವನ್ನು ಅನುಭವಿಸಬಹುದು ಎಂದು ಅವರು ವಿಶ್ಲೇಷಿಸಿದರು.

ಕಾರ್ಯಕ್ರಮದಲ್ಲಿ ಗದಗದ ಆಧ್ಯಾತ್ಮಿಕ ವಿದ್ಯಾಶ್ರಮದ ಪೂಜ್ಯ ಶಿವಶರಣೆ ನೀಲಮ್ಮತಾಯಿ ಅಸುಂಡಿ, ಟ್ರಸ್ಟ್ ಕಮಿಟಿ ಅಧ್ಯಕ್ಷ ಕೊಟ್ರಪ್ಪ ಕಮತರ, ಜಾತ್ರಾ ಕಮಿಟಿ ಕಾರ್ಯಾಧ್ಯಕ್ಷ ಫಕೀರಪ್ಪ ಹೆಬಸೂರ, ಕಾಂಗ್ರೆಸ್ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ನೀಲಮ್ಮ ಬೋಳನವರ, ಕಿತ್ತೂರು ಕರ್ನಾಟಕ ದಿನಪತ್ರಿಕೆ ಸಂಪಾದಕ ಮಂಜುನಾಥ ಅಬ್ಬಿಗೇರಿ, ಎಸ್‌ಎಸ್‌ಕೆ ಸಮಾಜದ ಮುಖಂಡ ಕಿಶನ ಮೆಹರವಾಡೆ, ನಗರಸಭೆ ಸದಸ್ಯೆ ಲಕ್ಷ್ಮಿ ಸಿದ್ದಮ್ಮನಹಳ್ಳಿ, ಮಾಧೂಸಾ ಮೆಹರವಾಡೆ, ಶಕುಂತಲಾ ಅಕ್ಕಿ, ಲಕ್ಷ್ಮಿ ಕಾಕಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಗೀತಾಂಜಲಿ ಗೌಡರ ಪ್ರಾರ್ಥಿಸಿದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು. ಪಂಚಾಕ್ಷರಿ ಅಂಗಡಿ ವಂದಿಸಿದರು. ನಂತರ ಮಂಡ್ಯ ಹಾಗೂ ಮೈಸೂರಿನ ಸವಿತಾ ಪೂಜಾ ಕುಣಿತ ತಂಡದಿಂದ ಆಕರ್ಷಕ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

> ಹಸಿದವರಿಗೆ ಅನ್ನ, ಬಾಯಾರಿದವರಿಗೆ ನೀರು, ಮಾನ ಮುಚ್ಚಿಕೊಳ್ಳಲು ಬಟ್ಟೆ ನೀಡಿ, ಕಷ್ಟದಲ್ಲಿರುವವರಿಗೆ ನೆರವಾದಾಗ ಮಾತ್ರ ನಮ್ಮ ಜೀವನ ಸಾರ್ಥಕವಾಗುತ್ತದೆ. ನನ್ನನ್ನು ಪ್ರೀತಿಸಿದಂತೆ ಮತ್ತೊಬ್ಬರನ್ನು ಪ್ರೀತಿಸಬೇಕು. ಕಷ್ಟದ ಸಂದರ್ಭದಲ್ಲಿ ನಾವು ಮಾಡಿದ ಧರ್ಮ ಮಾತ್ರ ನಮ್ಮನ್ನು ಕಾಯುತ್ತದೆ. ಆದ್ದರಿಂದ ಧರ್ಮವಂತರಾಗಿ ಬಾಳಬೇಕು.
> - ಅಭಿನವ ಜಗದ್ಗುರು ಬೂದೀಶ್ವರ ಮಹಾಸ್ವಾಮಿಗಳು

## ಲಕ್ಷ್ಮೇಶ್ವರದಲ್ಲಿ ಪುರಸಭೆಯ ವಿಶೇಷ ಕಾರ್ಯಾಚರಣೆ | 7 ತಿಂಗಳಲ್ಲಿ 1,100 ನಾಯಿ ಕಡಿತ ಪ್ರಕರಣ

# 300ಕ್ಕೂ ಹೆಚ್ಚು ಬೀದಿ ನಾಯಿಗಳು, 80 ಹಂದಿಗಳು ಸ್ಥಳಾಂತರ!


**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಹೆಚ್ಚಾಗಿದ್ದ ಬೀದಿ ನಾಯಿಗಳು ಹಾಗೂ ಹಂದಿಗಳ ಹಾವಳಿಗೆ ಕಡಿವಾಣ ಹಾಕಲು ಪುರಸಭೆ ವಿಶೇಷ ಕಾರ್ಯಾಚರಣೆ ನಡೆಸಿದ್ದು, ಎರಡು ದಿನಗಳಲ್ಲಿ 300ಕ್ಕೂ ಹೆಚ್ಚು ಬೀದಿ ನಾಯಿಗಳು ಹಾಗೂ 80 ಹಂದಿಗಳನ್ನು ಹಿಡಿದು ಸ್ಥಳಾಂತರಿಸಿದೆ.

ಇತ್ತೀಚೆಗೆ ಬೀದಿ ನಾಯಿಗಳು ಮಕ್ಕಳು, ಆಕಳ ಕರುಗಳು, ಆಡು-ಕುರಿ ಮರಿಗಳ ಮೇಲೆ ದಾಳಿ ನಡೆಸಿ ಗಾಯಗೊಳಿಸಿದ ಘಟನೆಗಳು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದ್ದವು.

ಕಳೆದ ಏಳು ತಿಂಗಳಲ್ಲಿ 1,100 ನಾಯಿ ಕಡಿತ ಪ್ರಕರಣಗಳು ನಡೆದಿರುವ ಹಿನ್ನೆಲೆಯಲ್ಲಿ ಪಟ್ಟಣದ ವಿವಿಧ ಬಡಾವಣೆಗಳಲ್ಲಿ ಗುಂಪು ಗುಂಪಾಗಿ ಸಂಚರಿಸುವ ಬೀದಿ ನಾಯಿಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ಪುರಸಭೆಗೆ ಒತ್ತಾಯಿಸಿದ್ದರು.

ಸಾರ್ವಜನಿಕರ ದೂರುಗಳಿಗೆ ಸ್ಪಂದಿಸಿದ ಪುರಸಭೆ ಮುಖ್ಯಾಧಿಕಾರಿ ಪಿ.ಕೆ. ಗುಡದಾರಿ ಅವರು ಪರಿಣಿತ



ತಂಡವನ್ನು ಕರೆಯಿಸಿ ಮಂಗಳವಾರ ಹಾಗೂ ಬುಧವಾರ ವಿಶೇಷ ಕಾರ್ಯಾಚರಣೆ ನಡೆಸಿದರು. ಪಟ್ಟಣದ ಮುಖ್ಯ ಬಜಾರ್ ರಸ್ತೆ, ಕೆಂಚಲಾಪುರ ಹಳ್ಳ, ದೂದಪೀರಾಂ ದರ್ಗಾ, ಶಾದಿಮಹಲ್, ಚಿಕನ್ ಮಾರ್ಕೆಟ್, ಹೂವಿನ ಬಜಾರ್, ಶಿಗ್ಲಿ ಕ್ರಾಸ್, ಪೊಲೀಸ್ ಠಾಣೆ, ಇಂದಿರಾನಗರ, ಬಸ್ ನಿಲ್ದಾಣ, ಪುರಸಭೆ ಕಚೇರಿ, ಸೋಮೇಶ್ವರ ಗುಡಿ, ಅಂಬೇಡ್ಕರ್ ನಗರ, ಮಂಜಲಾಪುರ ಸೇರಿದಂತೆ ವಿವಿಧೆಡೆ ಕಾರ್ಯಾಚರಣೆ ನಡೆಯಿತು.

ಬೀದಿ ನಾಯಿಗಳ ಸಂಖ್ಯೆಯನ್ನು ನಿಯಂತ್ರಿಸಲು ಪಟ್ಟಣದ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಪ್ರತ್ಯೇಕ ಶೆಡ್ ನಿರ್ಮಿಸಿ ಸಂತಾನಹರಣ ಚಿಕಿತ್ಸೆ ನೀಡಲು ಪುರಸಭೆ ಮುಂದಾಗಿದೆ. ಈ ಸಂಬಂಧ ಟೆಂಡರ್ ಪ್ರಕ್ರಿಯೆ ಕೈಗೊಳ್ಳಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಪಿ.ಕೆ. ಗುಡದಾರಿ ಹಾಗೂ ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ ತಿಳಿಸಿದ್ದಾರೆ.

ಬೀದಿ ನಾಯಿಗಳ ನಿಯಂತ್ರಣಕ್ಕೆ ನಿರಂತರ ಕಾರ್ಯಾಚರಣೆ, ಸಂತಾನಹರಣ ಚಿಕಿತ್ಸೆ ಹಾಗೂ ವೈಜ್ಞಾನಿಕ ತ್ಯಾಜ್ಯ ನಿರ್ವಹಣೆ ಅಗತ್ಯವಾಗಿದೆ. ಪುರಸಭೆಯ ಕ್ರಮಕ್ಕೆ ಸಾರ್ವಜನಿಕರಿಂದಲೂ ಸಹಕಾರ ದೊರೆತರೆ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗಲಿದೆ.

ಸದ್ಯದ ಕಾರ್ಯಾಚರಣೆಯಿಂದ ಸಾರ್ವಜನಿಕರು ಕೊಂಚ ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದು, ಪುರಸಭೆ ನಿರಂತರ ನಿಗಾವಹಿಸಿ ಕ್ರಮ ಕೈಗೊಳ್ಳಬೇಕು ಎಂಬುದು ಸಾರ್ವಜನಿಕರ ಒತ್ತಾಸೆಯಾಗಿದೆ.

## ಸಾಧಕರೊಂದಿಗೆ ಚಿಂತನ-ಮಂಥನ ಕಾರ್ಯಕ್ರಮ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಹಾಗೂ ಡಿ.ವಿ. ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಸಹಯೋಗದಲ್ಲಿ ಸರ್ಕಾರಿ ಚಿತ್ರಕಲಾ ಮಹಾವಿದ್ಯಾಲಯದಲ್ಲಿ ಗುರುವಾರ ಕಲಾವಿದ ಪ್ರೊ. ಬಾಬು ಜತ್ತಕರ ಅವರ ಚಿತ್ರಕಲಾ ಪ್ರದರ್ಶನ, ಪ್ರಾತ್ಯಕ್ಷಿಕೆ ಹಾಗೂ ಸಂವಾದ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮವನ್ನು ಟ್ರಸ್ಟ್ ಅಧ್ಯಕ್ಷ ರಂಜಾನ್ ದರ್ಗಾ ಉದ್ಘಾಟಿಸಿದರು. ಬಿ. ಮಾರುತಿ, ಎಫ್.ವಿ. ಚಿಕ್ಕಮಠ, ಡಾ. ಬಿ.ಎಲ್. ಚವ್ಹಾಣ, ಡಾ. ರೇಣುಕಾ ಮಾರ್ಕಂಡೇಯ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಮೂರು ದಶಕಗಳಿಂದ ಚಿತ್ರಕಲಾ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಪ್ರೊ. ಬಾಬು ಜತ್ತಕರ ಅವರು ಸಾವಿರಾರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ್ದು, ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಹಲವು ಪ್ರಶಸ್ತಿ-ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

### ಆರ್‌ಸಿಬಿಗೆ ಸೋಲುಣಿಸಿದ ವಿನ್ನರ್ಸ್ ಸೆಮಿಫೈನಲ್‌ಗೆ; ಆ.22ಕ್ಕೆ ನಿರ್ಣಾಯಕ ಕಾದಾಟ

# ಫೈನಲ್‌ಗೆ ಲಗ್ಗೆಯಿಟ್ಟ ನೈಟ್ ರೈಡರ್ಸ್





**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ವತಿಯಿಂದ ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ನಡೆಯುತ್ತಿರುವ ಗದಗ ಮೀಡಿಯಾ ಕ್ರಿಕೆಟ್ ಲೀಗ್ ದಿನದಿಂದ ದಿನಕ್ಕೆ ರೋಚಕತೆ ಪಡೆದುಕೊಳ್ಳುತ್ತಿದ್ದು, ನೈಟ್ ರೈಡರ್ಸ್ ತಂಡವು ತನ್ನ ಎರಡನೇ ಪಂದ್ಯದಲ್ಲೇ ರೂರಲ್ ಕಿಂಗ್ಸ್ ತಂಡವನ್ನು 7 ವಿಕೆಟ್‌ಗಳ ಅಂತರದಿಂದ ಮಣಿಸಿ, ಇನ್ನೂ ಒಂದು ಪಂದ್ಯ ಬಾಕಿ ಇರುವಂತೆಯೇ ಫೈನಲ್‌ಗೆ ಲಗ್ಗೆಯಿಟ್ಟಿದೆ.

ಗುರುವಾರ ನಡೆದ ಪಂದ್ಯಾವಳಿಯ ನಾಲ್ಕನೇ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ರೂರಲ್ ಕಿಂಗ್ಸ್ ತಂಡ ನಿಗದಿತ 10 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 85 ರನ್ ಗಳಿಸಿತು. ಸೂರಜ್ ಮಯೇಕರ್ 28, ಪ್ರಕಾಶ ಗುದ್ದಿನ 14 ಹಾಗೂ ನಿಂಗನಗೌಡ ಹನಮಗೌಡ್ರ 13 ರನ್ ಗಳಿಸಿದರು. ನೈಟ್ ರೈಡರ್ಸ್ ಪರ ಮಂಜು ಪತ್ತಾರ 2 ವಿಕೆಟ್ ಪಡೆದರೆ, ಅರುಣಕುಮಾರ ಹಿರೇಮಠ ಹಾಗೂ ಸಂಗನಗೌಡ ಖಾನಪ್ಪಗೌಡ್ರ, ಸುರೇಶ್ ಕಡ್ಲಿಮಟ್ಟಿ ತಲಾ ಒಂದು ವಿಕೆಟ್ ಪಡೆದರು.

86 ರನ್‌ಗಳ ಗುರಿ ಬೆನ್ನತ್ತಿದ ನೈಟ್ ರೈಡರ್ಸ್ ತಂಡ ಮೊದಲ ಓವರ್‌ನಲ್ಲಿ 8 ರನ್ ಗಳಿಸಿದ್ದಾಗಲೇ ಒಂದು ವಿಕೆಟ್ ಕಳೆದುಕೊಂಡಿತು. ಆದರೆ ನಾಯಕ ಸುರೇಶ ಕಡ್ಲಿಮಟ್ಟಿ ಹಾಗೂ ಅರುಣಕುಮಾರ ಹಿರೇಮಠ ಅವರು ಜವಾಬ್ದಾರಿಯುತ ಬ್ಯಾಟಿಂಗ್ ನಡೆಸಿ 73 ರನ್‌ಗಳ ಅಮೋಘ ಜೊತೆಯಾಟ ನೀಡುವ ಮೂಲಕ ತಂಡವನ್ನು ಗೆಲುವಿನ ದಡ ಸೇರಿಸಿದರು. ನೈಟ್ ರೈಡರ್ಸ್ ತಂಡ ಒಂದು ಓವರ್ ಬಾಕಿ ಇರುವಂತೆಯೇ 3 ವಿಕೆಟ್ ಕಳೆದುಕೊಂಡು ಗುರಿ ತಲುಪಿತು. ನಾಯಕ ಸುರೇಶ ಕಡ್ಲಿಮಟ್ಟಿ ಕೇವಲ 19 ಎಸೆತಗಳಲ್ಲಿ 41 ರನ್ ಸಿಡಿಸಿದರೆ, ಅರುಣಕುಮಾರ ಹಿರೇಮಠ 20 ಎಸೆತಗಳಲ್ಲಿ 33 ರನ್ ಗಳಿಸಿ ಮಿಂಚಿದರು. ಸ್ಫೋಟಕ ಬ್ಯಾಟಿಂಗ್ ಮೂಲಕ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದ ಸುರೇಶ ಕಡ್ಲಿಮಟ್ಟಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

**ಆರ್‌ಸಿಬಿಗೆ ಸೋಲು; ವಿನ್ನರ್ಸ್ ಸೆಮಿಫೈನಲ್‌ಗೆ**

ಇದಕ್ಕೂ ಮುನ್ನ ನಡೆದ ಮೂರನೇ ಪಂದ್ಯದಲ್ಲಿ ಆರ್‌ಸಿಬಿ ತಂಡವನ್ನು 8 ವಿಕೆಟ್‌ಗಳಿಂದ ಮಣಿಸಿದ ವಿನ್ನರ್ಸ್ ತಂಡ ಸೆಮಿಫೈನಲ್‌ಗೆ ಲಗ್ಗೆ ಇಟ್ಟಿತು. ಸತತ ಎರಡು ಪಂದ್ಯಗಳಲ್ಲಿ ಸೋಲು ಕಂಡ ಆರ್‌ಸಿಬಿ ತಂಡ ಟೂರ್ನಿಯಿಂದ ಹೊರಬಿದ್ದಿತು.

ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಆರ್‌ಸಿಬಿ ತಂಡ ನಿಗದಿತ 10 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 84 ರನ್ ಗಳಿಸಿತು. ವಿನಾಯಕ ಚೌಡಾಪೂ 24 ಹಾಗೂ ಫಿರೋಜ್ ಮೊಮಿನ್ 18 ರನ್ ಗಳಿಸಿದರು. ವಿನ್ನರ್ಸ್ ಪರ ಅಶೋಕ ಹೂಗಾರ 2 ವಿಕೆಟ್ ಪಡೆದರೆ, ಈಶ್ವರ ತಿಪ್ಪರಡ್ಡಿ, ಬನೇಶ ಕುಲಕರ್ಣಿ ಹಾಗೂ ಪರಮೇಶ ಲಮಾಣಿ ತಲಾ ಒಂದು ವಿಕೆಟ್ ಪಡೆದರು.

85 ರನ್‌ಗಳ ಗುರಿ ಬೆನ್ನತ್ತಿದ ವಿನ್ನರ್ಸ್ ತಂಡದ ಆರಂಭಿಕ ಆಟಗಾರರಾದ ಅನಿಲ ತೆಂಬದಮನಿ ಹಾಗೂ ಅನಿಲ ಚಲವಾದಿ ತಂಡಕ್ಕೆ ಭರ್ಜರಿ ಆರಂಭ ಒದಗಿಸಿದರು. ಅನಿಲ ತೆಂಬದಮನಿ 33 ಹಾಗೂ ಅನಿಲ ಚಲವಾದಿ 31 ರನ್ ಗಳಿಸಿ ಅಜೇಯರಾಗುಳಿದು ತಂಡವನ್ನು 8 ವಿಕೆಟ್‌ಗಳ ಭರ್ಜರಿ ಗೆಲುವಿನತ್ತ ಕೊಂಡೊಯ್ದರು. ಆರ್‌ಸಿಬಿ ಪರ ಗೌರೀಶ ಒಂದು ವಿಕೆಟ್ ಪಡೆದರು. 33 ರನ್ ಗಳಿಸಿ ಅಜೇಯರಾಗಿದ್ದ ಅನಿಲ ತೆಂಬದಮನಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

### ಆ.22ರಂದು ಸೆಮಿಫೈನಲ್, ಆ.23ಕ್ಕೆ ಫೈನಲ್

**ಆ.22ರಂದು ರೂರಲ್ ಕಿಂಗ್ಸ್ ಹಾಗೂ ವಿನ್ನರ್ಸ್ ತಂಡಗಳ ನಡುವೆ ಸೆಮಿಫೈನಲ್ ಪಂದ್ಯ ನಡೆಯಲಿದೆ. ಈ ಪಂದ್ಯದಲ್ಲಿ ಗೆಲುವು ಸಾಧಿಸುವ ತಂಡ ಫೈನಲ್‌ಗೆ ಅರ್ಹತೆ ಪಡೆಯಲಿದೆ. ನಂತರ ನೈಟ್ ರೈಡರ್ಸ್ ಹಾಗೂ ಆರ್‌ಸಿಬಿ ನಡುವೆ ಔಪಚಾರಿಕ ಪಂದ್ಯ ನಡೆಯಲಿದೆ. ಹೀಗಾಗಿ ರೂರಲ್ ಕಿಂಗ್ಸ್‌ವಿನ್ನರ್ಸ್ ನಡುವಿನ ಸೆಮಿಫೈನಲ್ ಪಂದ್ಯದತ್ತ ಎಲ್ಲರ ಚಿತ್ತ ನೆಟ್ಟಿದ್ದು, ಗೆಲುವು ಸಾಧಿಸುವ ತಂಡ ಆ.23ರಂದು ನಡೆಯುವ ಫೈನಲ್‌ನಲ್ಲಿ ಈಗಾಗಲೇ ಫೈನಲ್ ಪ್ರವೇಶಿಸಿರುವ ನೈಟ್ ರೈಡರ್ಸ್ ತಂಡವನ್ನು ಎದುರಿಸಲಿದೆ.**

---

## ಸಂಕ್ಷಿಪ್ತ ಸುದ್ದಿಗಳು

### ಹರ್ಷಾ ಹೋಮ್ ಪ್ರಾಡಕ್ಟ್ಸ್‌ಗೆ ಪ್ರಥಮ; ಜಿವಿಆರ್ ಮಾರ್ಕೆಟಿಂಗ್, ತ್ರಿವೇಣಿ ಬೋಟಿಕ್ಸ್‌ಗೆ ನಂತರದ ಸ್ಥಾನ

# ಗದಗ ಉತ್ಸವಕ್ಕೆ ತೆರೆ

### ಶ್ರೇಷ್ಠ ಮಳಿಗೆಗಳಿಗೆ ಪ್ರಶಸ್ತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ ಹಾಗೂ ಜಿಲ್ಲಾ ಪಂಚಾಯಿತಿ ಆಶ್ರಯದಲ್ಲಿ ಎಪಿಎಂಸಿ ಯಾರ್ಡ್‌ನ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಆಯೋಜಿಸಿದ್ದ ಗದಗ ಉತ್ಸವ-2026 ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳಕ್ಕೆ ಮಂಗಳವಾರ ತೆರೆ ಬಿದ್ದಿತು.

ಸಮಾರೋಪ ಸಮಾರಂಭದಲ್ಲಿ ಶ್ರೇಷ್ಠ ಮಳಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ಹಳ್ಳಿಕೇರಿಯ ಹರ್ಷಾ ಹೋಮ್ ಪ್ರಾಡಕ್ಟ್ಸ್ ಪ್ರಥಮ, ಗದಗದ ಜಿವಿಆರ್ ಮಾರ್ಕೆಟಿಂಗ್ ದ್ವಿತೀಯ ಹಾಗೂ ತ್ರಿವೇಣಿ ಬೋಟಿಕ್ಸ್ ತೃತೀಯ ಸ್ಥಾನ ಪಡೆದವು. ಬೆಂಗಳೂರಿನ ಆ್ಯಪಲ್ ಸಾಲಟೆಕ್ಸ್‌ಗೆ ವಿಶೇಷ ಬಹುಮಾನ ನೀಡಲಾಯಿತು.

ಗದಗ ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿ ಮಹೇಶ್ವರ ಸ್ವಾಮಿಗಳು ಹಾಗೂ ಮುಖ್ಯ ಅತಿಥಿ ಅಡಿವೆಪ್ಪ ತಿರ್ಲಾಪೂರ ಪ್ರಶಸ್ತಿ ಪ್ರದಾನ ಮಾಡಿದರು. ಇದೇ ಸಂದರ್ಭದಲ್ಲಿ ಅಡುಗೆ ಸ್ಪರ್ಧೆಯ ವಿಜೇತರು, ಪ್ರಾಯೋಜಕರು, ಚೇಂಬರ್‌ನ ಮಾಜಿ ಅಧ್ಯಕ್ಷರು ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಯಶಸ್ಸಿಗೆ ಶ್ರಮಿಸಿದವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ವಹಿಸಿದ್ದರು. ಉತ್ಸವ ಸಮಿತಿ ಚೇರ್ಮನ್ ಮಧುಸೂದನ ಪುಣೇಕರ ಮಾತನಾಡಿದರು. ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಉಪಾಧ್ಯಕ್ಷರಾದ ಜಯದೇವ ಮೆಣಸಗಿ, ಪ್ರಕಾಶ ಉಗಲಾಟ, ಸಿದ್ರಾಮಪ್ಪ ಉಮಚಗಿ, ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಕಾಲವಾಡ, ಅಶೋಕ ಸಂಕಣ್ಣವರ, ಕೋಶಾಧ್ಯಕ್ಷ ಅರವಿಂದ ಕಾಮತ, ಮಂಜುನಾಥ ವೀರಲಿಂಗಯ್ಯನಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಚಂದ್ರು ಬಾಳಿಹಳ್ಳಿಮಠ ಹಾಗೂ ಮುರುಗೇಶ ಬಡ್ನಿ ನಿರೂಪಿಸಿದರು.



### ಗ್ರಾಮೀಣ ಅಭಿವೃದ್ಧಿಗೆ ಕಳಕಪ್ಪ ಬಂಡಿ ಕೊಡುಗೆ ಅಪಾರ

### ಮಾಜಿ ಸಚಿವರ 58ನೇ ಜನ್ಮದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಡಂಬಳ**


ಮಾಜಿ ಸಚಿವ ಕಳಕಪ್ಪ ಬಂಡಿ ಅವರು ಅಧಿಕಾರದಲ್ಲಿದ್ದ ಅವಧಿಯಲ್ಲಿ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಿ ರಸ್ತೆ, ಕುಡಿಯುವ ನೀರು, ಶಿಕ್ಷಣ, ನೀರಾವರಿ ಹಾಗೂ ಮೂಲಸೌಕರ್ಯ ಕ್ಷೇತ್ರಗಳಿಗೆ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದರು ಎಂದು ಬಿಜೆಪಿ ಡಂಬಳ ಮಂಡಳ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ಮಲ್ಲಪ್ಪ ಮಠದ ಹೇಳಿದರು.

ಕಳಕಪ್ಪ ಬಂಡಿ ಅವರ 58ನೇ ಜನ್ಮದಿನದ ಅಂಗವಾಗಿ ಡಂಬಳ ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರೋಗಿಗಳಿಗೆ ಹಣ್ಣು ವಿತರಿಸಿ, ಆವರಣದಲ್ಲಿ ಸಸಿ ನೆಟ್ಟು ಹಾಗೂ ಅಂಗನವಾಡಿ ಮಕ್ಕಳಿಂದ ಕೇಕ್ ಕತ್ತರಿಸಿ ಹಣ್ಣು ಹಂಪಲ ವಿತರಿಸುವ ಮೂಲಕ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಮಲ್ಲಪ್ಪ ಮಠದ, ಗಜೇಂದ್ರಗಡ, ಮುಂಡರಗಿ ಹಾಗೂ ರೋಣ ಪಟ್ಟಣಗಳ ಅಭಿವೃದ್ಧಿಗೂ ಕಳಕಪ್ಪ ಬಂಡಿ ಅವರ ಕೊಡುಗೆ ಇದೆ ಎಂದರು.

ಮಾಜಿ ಜಿಲ್ಲಾ ಪಂಚಾಯಿತಿ ಉಪಾಧ್ಯಕ್ಷ ಭೀರಪ್ಪ ಬಂಡಿ, ಮುಖಂಡರಾದ ನಾಗರಾಜ ಕಾಟರಳ್ಳಿ ಹಾಗೂ ಉಮೇಶ ಅಂಕದ ಮಾತನಾಡಿ, ಬಿಜೆಪಿ ಸರ್ಕಾರದ ಅವಧಿಯಲ್ಲಿ ರೋಣ ಕ್ಷೇತ್ರಕ್ಕೆ ಶಿಕ್ಷಣ, ಕಾಲೇಜು, ರಸ್ತೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಅನುದಾನ ದೊರಕಿಸುವಲ್ಲಿ ಕಳಕಪ್ಪ ಬಂಡಿ ಪ್ರಮುಖ ಪಾತ್ರ ವಹಿಸಿದ್ದರು ಎಂದರು.

ಯುವ ಮುಖಂಡರಾದ ಪ್ರಕಾಶ ಕೋತಂಬ್ರಿ ಹಾಗೂ ಶಿವಾನಂದ ಬಂಡಿ ಮಾತನಾಡಿ, ರೈತರು, ಬಡವರು, ಕಾರ್ಮಿಕರು ಹಾಗೂ ಹಿಂದುಳಿದ ವರ್ಗಗಳ ಸಮಸ್ಯೆಗಳಿಗೆ ಸ್ಪಂದಿಸಿದ ಕಳಕಪ್ಪ ಬಂಡಿ, ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಹಲವು ಗ್ರಾಮಗಳಿಗೆ ಅನುದಾನ ಕಲ್ಪಿಸಿದ್ದಾರೆ ಎಂದರು.


ಈ ಸಂದರ್ಭದಲ್ಲಿ ಕೆ.ಕೆ. ಬಂಡಿ, ಹನಮಂತಪ್ಪ ಹಾದಿಮನಿ, ರವಿ ಕರಿಗಾರ, ಬಸವರಾಜ ಸಂಗನಾಳ, ಗವಿಯಪ್ಪ ಮಠದ, ಪುಂಡಲೀಕ ಪಾರಪ್ಪನವರ, ಪ್ರಜ್ವಲ ಮಾನೆ, ಶ್ರೀಧರ ಬಂಡಿ, ಹನಮಪ್ಪ ಬಂಡಿ, ಫಕೀರಪ್ಪ ಬಿಸಾಟಿ, ಮುದಕಪ್ಪ ಮುಳಗುಂದ ಸೇರಿದಂತೆ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.



---

### ಕೌಶಲ ಬೆಳೆಸಿಕೊಂಡು ಸಾಧನೆಯತ್ತ ಸಾಗಿರಿ: ಸಾರಾ ಹಣಗಿ

# ಮನೋರಮಾ ಕಾಲೇಜಿನಲ್ಲಿ ಹೊಸ ವಿದ್ಯಾರ್ಥಿಗಳಿಗೆ ಸ್ವಾಗತ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಪ್ರತಿಷ್ಠಿತ ಮನೋರಮಾ ಕಾಲೇಜಿನಲ್ಲಿ ಬಿಸಿಎ, ಬಿಬಿಎ ಹಾಗೂ ಬಿಕಾಂ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ವೆಲ್ ಕಮ್ ಡೇ ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಲಾಯಿತು.

ಮುಖ್ಯ ಅತಿಥಿಯಾಗಿ ಕಾಲೇಜಿನ ಹಳೆಯ ವಿದ್ಯಾರ್ಥಿನಿ ಹಾಗೂ ಪ್ರಸ್ತುತ ಬ್ಯಾಂಕ್‌ವೊಂದರಲ್ಲಿ ವ್ಯವಸ್ಥಾಪಕರಾಗಿ ಸೇವೆ ಸಲ್ಲಿಸುತ್ತಿರುವ ಸಾರಾ ಹಣಗಿ ಭಾಗವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಸತತ ಅಧ್ಯಯನದ ಜತೆಗೆ ಆಲಿಸುವ ಕೌಶಲ, ಬರವಣಿಗೆ ಹಾಗೂ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಆದರ್ಶ ವ್ಯಕ್ತಿಗಳ ಜೀವನವನ್ನು ಮಾದರಿಯನ್ನಾಗಿಸಿಕೊಂಡು ಸಾಧನೆಯತ್ತ ಸಾಗಬೇಕು ಎಂದು ಕರೆ ನೀಡಿದರು.

ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾದ ವಾತಾವರಣ ಹಾಗೂ ಉತ್ತಮ ಕಲಿಕಾ ಗುಣಮಟ್ಟ ಕಾಲೇಜಿನಲ್ಲಿದೆ. ವಿದ್ಯಾರ್ಥಿಗಳು ದೊರೆಯುವ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಹಳೆಯ ವಿದ್ಯಾರ್ಥಿಗಳು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಬಿಸಿಎ ಸಂಯೋಜಕಿ ಪ್ರೊ. ಸವಿತಾ ಪೂಜಾರ ಮಾತನಾಡಿ, ಇದೇ ಕಾಲೇಜಿನಲ್ಲಿ ವಿದ್ಯಾಭ್ಯಾಸ ಪೂರೈಸಿ ಬ್ಯಾಂಕ್ ವ್ಯವಸ್ಥಾಪಕರಾಗಿ ಸೇವೆ ಸಲ್ಲಿಸುತ್ತಿರುವ ಸಾರಾ ಹಣಗಿ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿರುವುದು ಗುರು-ಶಿಷ್ಯ ಪರಂಪರೆಗೆ ಸಾಕ್ಷಿಯಾಗಿದೆ ಎಂದರು.

ಬಿಬಿಎ ಸಂಯೋಜಕಿ ಪ್ರೊ. ಆರತಿ ಗೌಡರ ಹಾಗೂ ಬಿಕಾಂ ಸಂಯೋಜಕಿ ಪ್ರೊ. ಸಾವಿತ್ರಿ ಕಡಿವಾಲ ಅವರು ಪಿಪಿಟಿ ಮೂಲಕ ಕೋರ್ಸ್‌ಗಳಿಂದ ದೊರೆಯುವ ಶೈಕ್ಷಣಿಕ ಹಾಗೂ ವೃತ್ತಿಪರ ಅವಕಾಶಗಳ ಕುರಿತು ಮಾಹಿತಿ ನೀಡಿದರು. ಸಂಸ್ಥೆಯ ಚೇರ್ಮನ್ ಎನ್.ಎಂ. ಕುಡತರಕರ ಅಧ್ಯಕ್ಷತೆ ವಹಿಸಿದ್ದರು. ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಕಾರ್ಯದರ್ಶಿ ಮಂಜುನಾಥ ಕುಡತರಕರ, ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ ಹಾಗೂ ಮಹಾವಿದ್ಯಾಲಯದ ಸಿಬ್ಬಂದಿ ಉಪಸ್ಥಿತರಿದ್ದರು.

> **ಸತತ ಅಧ್ಯಯನದ ಜತೆಗೆ ಆಲಿಸುವ, ಓದುವ ಮತ್ತು ಬರೆಯುವ ಕೌಶಲ ಬೆಳೆಸಿಕೊಂಡು ಆದರ್ಶ ವ್ಯಕ್ತಿಗಳ ಜೀವನದಿಂದ ಸ್ಫೂರ್ತಿ ಪಡೆದು ಸಾಧನೆಯತ್ತ ಸಾಗಬೇಕು.**
> **– ಸಾರಾ ಹಣಗಿ,** ಹಳೆಯ ವಿದ್ಯಾರ್ಥಿನಿ ಹಾಗೂ ಬ್ಯಾಂಕ್ ಮ್ಯಾನೇಜರ್

---

### ಅರ್ಥಶಾಸ್ತ್ರ ಉಪನ್ಯಾಸಕರಿಗೆ ಪುನಶ್ಚೇತನ ಕಾರ್ಯಾಗಾರ | ಸಾಧಕರು, ನಿವೃತ್ತರಿಗೆ ಸನ್ಮಾನ

# ಅರ್ಥಚೇತನದಿಂದ ಫಲಿತಾಂಶ ಹೆಚ್ಚಳ




**ವಿಜಯಸಾಕ್ಷಿ ಸುದ್ದಿ, ಗದಗ**

ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಅರ್ಥಚೇತನ ಪುಸ್ತಕ, ಮಾದರಿ ಪ್ರಶ್ನೆಪತ್ರಿಕೆ ಹಾಗೂ ಇಂತಹ ಕಾರ್ಯಾಗಾರಗಳಿಂದ ವಿದ್ಯಾರ್ಥಿಗಳ ವಾರ್ಷಿಕ ಪರೀಕ್ಷೆಯ ಫಲಿತಾಂಶ ಹೆಚ್ಚಿಸಲು ಅನುಕೂಲವಾಗುತ್ತಿದೆ ಎಂದು ಶಾಲಾ ಶಿಕ್ಷಣ ಇಲಾಖೆ (ಪಪೂ) ಉಪನಿರ್ದೇಶಕ ಎಸ್.ಬಿ. ಮಸನಾಯಕ ಹೇಳಿದರು.

ನಗರದ ಎಸ್.ಎ. ವಿಜ್ಞಾನ ಪಪೂ ಮಹಾವಿದ್ಯಾಲಯದಲ್ಲಿ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ, ಉಪನಿರ್ದೇಶಕರ ಕಚೇರಿ ಹಾಗೂ ಶಾಲಾ ಶಿಕ್ಷಣ ಇಲಾಖೆ (ಪಪೂ) ಸಹಯೋಗದಲ್ಲಿ ಅರ್ಥಶಾಸ್ತ್ರ ಉಪನ್ಯಾಸಕರಿಗಾಗಿ ಆಯೋಜಿಸಿದ್ದ ಒಂದು ದಿನದ ಪುನಶ್ಚೇತನ ತರಬೇತಿ ಕಾರ್ಯಾಗಾರ ಹಾಗೂ ಸಾಧಕರು, ನಿವೃತ್ತರ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಎಸ್.ಎಸ್. ಪಟ್ಟಣಶೆಟ್ಟಿ ಮಾತನಾಡಿ, ಶಿಕ್ಷಣ ವ್ಯವಸ್ಥೆಯಲ್ಲಿ ಇತ್ತೀಚಿನ ದಿನಗಳಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ಅರ್ಥಶಾಸ್ತ್ರ ಉಳಿದ ವಿಷಯಗಳಿಗಿಂತ ಭಿನ್ನ ಹಾಗೂ ಕಠಿಣವಾಗಿದ್ದು, ಜಗತ್ತು ಸಂಪೂರ್ಣವಾಗಿ ಅರ್ಥಶಾಸ್ತ್ರದ ಮೇಲೆ ನಿಂತಿದೆ ಎಂದರು.

ನಿವೃತ್ತ ಪ್ರಾಧ್ಯಾಪಕರಾದ ವಿ.ಎಸ್. ದಲಾಲಿ ಹಾಗೂ ಎಸ್.ಎಸ್. ಸೋಮನಗೌಡ್ರ ಮಾತನಾಡಿ, ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗೆ ಇಂತಹ ಕಾರ್ಯಾಗಾರಗಳು ನಿರಂತರವಾಗಿ ನಡೆಯಬೇಕು. 2008ರಿಂದ ಸಂಶೋಧನಾ ಕೇಂದ್ರದ ವತಿಯಿಂದ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಫಲಿತಾಂಶ ಸುಧಾರಣೆಗೆ ಪ್ರಯತ್ನಿಸಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಅರ್ಥಶಾಸ್ತ್ರ ವಿಷಯದಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು, ಸಾಧಕರು ಹಾಗೂ ನಿವೃತ್ತರನ್ನು ಸನ್ಮಾನಿಸಲಾಯಿತು. ಎಚ್.ಎಸ್. ಕಿಂದ್ರಿ, ವೈ.ಸಿ. ಪಾಟೀಲ, ಬಿ.ಎಸ್. ಮಲ್ಲಾಪೂರ ಸೇರಿದಂತೆ ಪಪೂ ಕಾಲೇಜುಗಳ ಉಪನ್ಯಾಸಕರ ಸಂಘದ ಪದಾಧಿಕಾರಿಗಳು ಹಾಗೂ ಉಪನ್ಯಾಸಕರು ಉಪಸ್ಥಿತರಿದ್ದರು.

> **ಅರ್ಥಚೇತನ ಪುಸ್ತಕ, ಮಾದರಿ ಪ್ರಶ್ನೆಪತ್ರಿಕೆ ಹಾಗೂ ಕಾರ್ಯಾಗಾರಗಳು ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗೆ ಉತ್ತಮ ವೇದಿಕೆಯಾಗಿವೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು.**
> **– ಎಸ್.ಬಿ. ಮಸನಾಯಕ,** ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪಪೂ)

---

### ದ್ಯಾಮಮ್ಮ-ದುರ್ಗಮ್ಮ ಹರಿಜಾತ್ರೆ: ಇಂದು ಜೋಗುತಿ, ದೀಪ ನೃತ್ಯ ಪ್ರದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗ್ರಾಮದೇವತೆಗಳಾದ ಶ್ರೀ ದ್ಯಾಮಮ್ಮ ಹಾಗೂ ಶ್ರೀ ದುರ್ಗಮ್ಮ ದೇವಿ ಯರ ಹರಿಜಾತ್ರೆ ಮಹೋತ್ಸವದ ಅಂಗವಾಗಿ ಆ.21ರಂದು ಸಂಜೆ 7 ಗಂಟೆಗೆ ಸಭಾ ಕಾರ್ಯಕ್ರಮ ನಡೆಯಲಿದೆ. ನರೇಗಲ್‌ನ ಪೂಜ್ಯ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ದಿವ್ಯ ಸಾನ್ನಿಧ್ಯ ವಹಿಸುವರು. ಟ್ರಸ್ಟ್ ಕಮಿಟಿ ಅಧ್ಯಕ್ಷ ಕೊಟ್ರಪ್ಪ ಕಮತರ ಅಧ್ಯಕ್ಷತೆ ವಹಿಸುವರು. ಜಾತ್ರಾ ಕಮಿಟಿ ಕಾರ್ಯಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಉಪಸ್ಥಿತರಿರುವರು.

ಲೆಕ್ಕಪರಿಶೋಧಕ ಶಂಕ್ರಪ್ಪ ಕನೋಜ, ಜೆ.ಜೆ. ಕಾಲೇಜಿನ ಐ.ಎಸ್. ಪೂಜಾರ, ಉಸಿರು ಫೌಂಡೇಶನ್ ಸಂಸ್ಥಾಪಕ ಶರಣು ಪಾಟೀಲ, ವ್ಯಾಪಾರಸ್ಥರಾದ ಸದಾಶಿವಯ್ಯ ಮದರಿಮಠ, ವಿಶ್ವನಾಥಯ್ಯ ಶಿವಪ್ಪಯ್ಯನಮಠ, ಯುವ ಧುರೀಣ ವಸಂತ ಪಡಗದ ಸೇರಿದಂತೆ ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ನಗರಸಭಾ ಸದಸ್ಯರಾದ ಕೃಷ್ಣ ಪರಾಪೂರ, ಆಸ್ಮಾ ರೇಷ್ಮಿ, ಜೈನುಲಾಲುದ್ದೀನ್ ನಮಾಜಿ, ಮಹಾಂತೇಶ ನಲವಡಿ, ಪರವೀನಬಾನು ಮುಲ್ಲಾ, ವ್ಯಾಪಾರಸ್ಥ ಎಚ್.ಕೆ. ಮುಲ್ಲಾ, ಗುತ್ತಿಗೆದಾರ ಎಫ್.ವಿ. ಮರಿಗೌಡರ ಸೇರಿದಂತೆ ಹಲವರು ಭಾಗವಹಿಸುವರು. ಸಭಾ ಕಾರ್ಯಕ್ರಮದ ಬಳಿಕ ರಾತ್ರಿ 8.30ಕ್ಕೆ ಶಂಕ್ರಣ್ಣ ಸಂಕಣ್ಣವರ ನೇತೃತ್ವದ ಕೊತಬಾಳದ ಅರುಣೋದಯ ಕಲಾತಂಡದಿಂದ ಜೋಗುತಿ ನೃತ್ಯ ಹಾಗೂ ದೀಪ ನೃತ್ಯ ಪ್ರದರ್ಶನ ನಡೆಯಲಿದೆ ಎಂದು ಜಾತ್ರೋತ್ಸವ ಕಮಿಟಿ ಪ್ರಕಟಣೆಯಲ್ಲಿ ತಿಳಿಸಿದೆ.

---

# ಉದ್ಯೋಗ ಖಾತ್ರಿ ಯೋಜನೆ ಸದುಪಯೋಗಪಡಿಸಿಕೊಳ್ಳಿ




**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಉದ್ಯೋಗದ ಅಗತ್ಯವಿರುವ ಕೂಲಿಕಾರರು ಜಾಬ್ ಕಾರ್ಡ್ ಮಾಡಿಸಿಕೊಂಡು ಉದ್ಯೋಗ ಖಾತ್ರಿ ಯೋಜನೆಯ ಸೌಲಭ್ಯ ಪಡೆಯಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಹೇಳಿದರು.

ತಾಲೂಕಿನ ಗೋಗೇರಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಬುಧವಾರ ಜಾಬ್ ಕಾರ್ಡ್ ಮೇಳ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆ.15ರಿಂದ ಸೆ.15 ರವರೆಗೆ ತಾಲೂಕಿನಾದ್ಯಂತ ಅಭಿಯಾನ ನಡೆಯಲಿದೆ. ಜಾಬ್ ಕಾರ್ಡ್ ಇಲ್ಲದವರು ಹೊಸ ಕಾರ್ಡ್ ಮಾಡಿಸಿಕೊಳ್ಳಬಹುದು. ಕಾರ್ಡ್‌ನಲ್ಲಿ ತಿದ್ದುಪಡಿ ಅಗತ್ಯವಿದ್ದರೆ ಮಾಡಿಸಿಕೊಳ್ಳುವುದರ ಜತೆಗೆ ಇ-ಕೈವೈಸಿ ನವೀಕರಣಕ್ಕೂ ಅವಕಾಶವಿದೆ ಎಂದರು.

ಕೆಲಸದ ಅಗತ್ಯವಿರುವವರು ನಮೂನೆ-6ರಲ್ಲಿ ಅರ್ಜಿ ಸಲ್ಲಿಸಿದರೆ ಯೋಜನೆಯಡಿ ಉದ್ಯೋಗ ಒದಗಿಸಲಾಗುವುದು. ಗ್ರಾಮ ಪಂಚಾಯಿತಿ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡುವ ಸಂದರ್ಭದಲ್ಲಿ ಕೂಲಿಕಾರರು ಅಗತ್ಯ ಮಾಹಿತಿ ನೀಡಿ ಅಭಿಯಾನ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಯೋಜನೆಯ ಕ್ರಿಯಾಯೋಜನೆಯಲ್ಲಿ ವೈಯಕ್ತಿಕ ಫಲಾನುಭವಿಗಳಾಗಿ ಆಯ್ಕೆಯಾಗಿರುವವರು ತಕ್ಷಣ ಕಾಮಗಾರಿ ಆದೇಶ ಪಡೆದು ಕಾಮಗಾರಿ ಆರಂಭಿಸುವಂತೆ ಸಿಬ್ಬಂದಿಗೆ ಸೂಚಿಸಿದರು. ಬಳಿಕ ಕಾಯಕ ಬಂಧುಗಳು ಹಾಗೂ ಗ್ರಾಮಸ್ಥರೊಂದಿಗೆ ಸಂವಾದ ನಡೆಸಿ, ಯೋಜನೆಯಡಿ ದೊರೆಯುವ ಉದ್ಯೋಗಾವಕಾಶ ಹಾಗೂ ವಿವಿಧ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಭಾರತ್ ಜೋಡೋ ಯುವ ಸಂಘ ನೋಂದಣಿ ಕುರಿತು ಮಾಹಿತಿ ನೀಡಿದ ಕಂದಕೂರ, 18ರಿಂದ 35 ವರ್ಷದೊಳಗಿನ ಯುವಕರು ನೋಂದಣಿ ಮಾಡಿಕೊಳ್ಳಬೇಕು. ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಕನಿಷ್ಠ 100 ಯುವಕರ ನೋಂದಣಿಯಾದರೆ ಸಂಘ ರಚನೆಯಾಗಲಿದ್ದು, ಎಲ್ಲ ಸಮುದಾಯಗಳ ಯುವಕರು ಹಾಗೂ ಮಹಿಳೆಯರು ಭಾಗವಹಿಸುವಂತೆ ಕ್ರಮವಹಿಸಬೇಕು ಎಂದರು.

ಐಇಸಿ ಸಂಯೋಜಕ ಮಂಜುನಾಥ ಹಳ್ಳದ, ಕಾರ್ಯದರ್ಶಿಗಳಾದ ಎಂ.ಎಂ. ಗೋಡೆಕಾರ, ಎನ್.ಜಿ. ಭಾಗವಾನ, ಕೆ.ಬಿ. ಮಾದರ, ಡಿ.ಕೆ. ವಾಲಿಕಾರ, ಯಲ್ಲವ್ವ ಗಾರಗಿ, ನಿಂಗಪ್ಪ ಸೋಂಪೂರ, ಕಾಯಕ ಬಂಧುಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

> **ಜಾಬ್ ಕಾರ್ಡ್ ಇಲ್ಲದ ಕೂಲಿಕಾರರು ಹೊಸ ಕಾರ್ಡ್ ಮಾಡಿಸಿಕೊಳ್ಳಿ, ತಿದ್ದುಪಡಿ ಹಾಗೂ ಇ-ಕೈವೈಸಿ ನವೀಕರಣಕ್ಕೂ ಅವಕಾಶವಿದೆ. ಎಲ್ಲರೂ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಉದ್ಯೋಗ ಖಾತ್ರಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು.**
> **– ಚಂದ್ರಶೇಖರ ಬಿ. ಕಂದಕೂರ,** ತಾ.ಪಂ. ಇಒ, ಗಜೇಂದ್ರಗಡ

---

### ಸತ್ಯ, ಸಂಸ್ಕಾರ, ಮಾನವೀಯತೆಯ ಬದುಕಿಗೆ ರುದ್ರಮುನಿ ಜಗದ್ಗುರುಗಳ ಕೊಡುಗೆ ಸ್ಮರಣೀಯ

# ಅನುಭವದ ಪಾಠ ಎಂದಿಗೂ ಮರೆಯಲಾಗದು




**ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಮನುಷ್ಯ ಕಲಿತ ಪಾಠಗಳನ್ನು ಕೆಲವೊಮ್ಮೆ ಮರೆಯಬಹುದು. ಆದರೆ ಅನುಭವದಿಂದ ಕಲಿತ ಪಾಠಗಳನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಗುರುವಾರ ನಡೆದ ಲಿಂ. ಶ್ರೀ ಜಗದ್ಗುರು ರುದ್ರಮುನಿ ಶಿವಾಚಾರ್ಯ ಭಗವತ್ಪಾದರ 34ನೇ ವರ್ಷದ ಪುಣ್ಯಸ್ಮರಣೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಹೂವಿನ ಪರಿಮಳ ಗಾಳಿ ಬೀಸಿದ ದಿಕ್ಕಿನಲ್ಲಷ್ಟೇ ಹರಡುತ್ತದೆ. ಆದರೆ ಮನುಷ್ಯನ ಒಳ್ಳೆಯತನ ಎಲ್ಲೆಡೆ ವ್ಯಾಪಿಸುತ್ತದೆ. ಸುಳ್ಳು ಹೇಳಿ ಜೀವನಪೂರ್ತಿ ಕಷ್ಟಪಡುವುದಕ್ಕಿಂತ ಸತ್ಯ ಕಹಿಯಾಗಿದ್ದರೂ ಅದನ್ನೇ ಹೇಳುವುದು ಒಳಿತು ಎಂದರು. ಲಿಂ. ಶ್ರೀ ಜಗದ್ಗುರು ರುದ್ರಮುನಿ ಶಿವಾಚಾರ್ಯ ಭಗವತ್ಪಾದರು ಕಾಯಕ, ದಯೆ, ಆಚಾರ, ಸಂಸ್ಕಾರ, ಗುಣ, ಆರೋಗ್ಯ ಹಾಗೂ ಅನುಭವಕ್ಕೆ ಮಹತ್ವ ನೀಡಿ ಭಕ್ತರ ಬಾಳಿಗೆ ಬೆಳಕು ತೋರಿದ ಪರಮಾಚಾರ್ಯರಾಗಿದ್ದರು. 19 ವರ್ಷಗಳ ಕಾಲ ಜಗದ್ಗುರುಗಳಾಗಿ ಮಾನವ ಧರ್ಮ, ಸಂಸ್ಕಾರ ಹಾಗೂ ಸಂಸ್ಕೃತಿಯ ಬೆಳವಣಿಗೆಗೆ ಶ್ರಮಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

ಬೇರುಗಂಡಿ ಬೃಹನ್ಮಠದ ರೇಣುಕ ಮಹಂತ ಶಿವಾಚಾರ್ಯರು ಮಾತನಾಡಿ, ಪರಿಶ್ರಮವಿಲ್ಲದೆ ಯಶಸ್ಸು ಬಯಸುವುದು ಬೀಜ ಬಿತ್ತದೆ ಫಲ ಬಯಸಿದಂತೆ. ಕಟ್ಟುವ, ಜೋಡಿಸುವ ಹಾಗೂ ಸಮಾಜದ ಶ್ರೇಯಸ್ಸಿಗಾಗಿ ನಿರಂತರ ಶ್ರಮಿಸಿದ ಕೀರ್ತಿ ರುದ್ರಮುನಿ ಜಗದ್ಗುರುಗಳಿಗೆ ಸಲ್ಲುತ್ತದೆ ಎಂದರು.

ಅಂಬಾಜೋಗಾಯಿ ಹಿರೇಮಠದ ಶಂಭುಲಿಂಗ ಶಿವಾಚಾರ್ಯರು ಮಾತನಾಡಿ, ಪರಿಶ್ರಮ ಮೆಟ್ಟಿಲಿನಂತಿದ್ದು, ಅದೃಷ್ಟ ಲಿಫ್ಟ್‌ನಂತಿದೆ. ಅದೃಷ್ಟ ಕೈಕೊಡಬಹುದು; ಆದರೆ ಪರಿಶ್ರಮದ ಮೆಟ್ಟಿಲು ಎಂದಿಗೂ ಕೈಕೊಡುವುದಿಲ್ಲ. ರುದ್ರಮುನಿ ಜಗದ್ಗುರುಗಳು ಕಾರುಣ್ಯದ ಮೂಲಕ ಭಕ್ತರಿಗೆ ಅಮೂಲ್ಯ ಮಾರ್ಗದರ್ಶನ ನೀಡಿದ್ದರು ಎಂದರು.

ಸ್ಮರಣೋತ್ಸವದ ಅಂಗವಾಗಿ ರುದ್ರಮುನಿ ಜಗದ್ಗುರುಗಳ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಿ, ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು. ವಿವಿಧ ಮಠಾಧೀಶರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಆಲ್ದೂರು ಹೋಬಳಿ ವೀರಶೈವ ಸಮಾಜದ ವತಿಯಿಂದ ಅನ್ನದಾಸೋಹ ಏರ್ಪಡಿಸಲಾಗಿತ್ತು. ಸಹಸ್ರಾರು ಭಕ್ತರು ಭಾಗವಹಿಸಿದ್ದರು.

> **ತುಂಬಿದ ಜೇಬು ನೂರು ಆಟ ಆಡಿಸುತ್ತದೆ, ಖಾಲಿ ಜೇಬು ನೂರು ಪಾಠ ಕಲಿಸುತ್ತದೆ. ಮನುಷ್ಯ ಮನೆ, ಊರು, ಬಟ್ಟೆ, ಸಂಬಂಧ, ಸ್ನೇಹಿತರನ್ನು ಬದಲಾಯಿಸಿದರೂ ನೆಮ್ಮದಿ ಸಿಗುವುದಿಲ್ಲ. ತನ್ನನ್ನು ತಾನು ಬದಲಾಯಿಸಿಕೊಂಡಾಗ ಮಾತ್ರ ಬದುಕಿನಲ್ಲಿ ನೆಮ್ಮದಿ ಸಾಧ್ಯ.**
> **– ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka